ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 230 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 31–03–2024 ಭಾನುವಾರ ಪುಟ: 4 ಬೆಲೆ : ರೂ.2–00
Volume - 01 Issue - 230 Title- Code: KARKAN 28269 Chitradurga Date: 31-03-2024 Sunday Page: 4 Price: Rs. 2-00

ಒಳಪುಟದ ಸುದ್ದಿಗಳು
ನೀತಿ ಸಂಹಿತೆ ಉಲ್ಲಂಘಿಸಿದರೆ ಪರವಾನಿಗೆ ರದ್ದು: ಸಹಾಯಕ ಚುನಾವಣಾಧಿಕಾರಿ 2
ಹೊಳಲ್ಕೆರೆ ಶಾಸಕ ಚಂದ್ರಪ್ಪ ರಾಜೀನಾಮೆಗೆ ಒತ್ತಾಯ 3
ಕುಡಿವ ನೀರು ಸಮಸ್ಯೆಗೆ ತಕ್ಷಣ ಸ್ಪಂದಿಸುವ ಕೆಲಸ ಆಗಬೇಕು 4

ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

ಟಿಕೆಟ್ ತಪ್ಪಿಸಲು ಅವನೇನು ದೊಡ್ಡ ಲೀಡರ್

» ಚಿತ್ರದುರ್ಗ

ನಾನು ಶಾಸಕನಾದಾಗ ಅವನು ಚಳ್ಳಕೆರೆಯಲ್ಲಿ ನಿಕ್ಕರ್ ಹಾಕಿಕೊಳ್ಳುತ್ತಿದ್ದನೋ ಇಲ್ಲವೋ ಗೊತ್ತಿಲ್ಲ, ನಾನು ಅವನಿಗಿಂತ ವಯಸ್ಸಿನಲ್ಲಿ ಹಿರಿಯನು, ನಾನು ಪಕ್ಷದ ವಿವಿಧ ಹುದ್ದಗಳಲ್ಲಿ ಕೆಲಸ ಮಾಡಿದ್ದೇನೆ ಇಡೀ ಜಿಲ್ಲೆಯ ಪ್ರತಿ ಪ್ರದೇಶದ ಚಿತ್ರಣ ನನಗೆ ಗೊತ್ತಿದೆ ವರಿಷ್ಠರು ಮಾಹಿತಿ ಕೇಳಿದಾಗ ನನ್ನ ಅಭಿಪ್ರಾಯ ಹೇಳಿದ್ದೇನೆ ಈ ಪೋತಪ್ಪ ನಾಯಕನಿಗೆ ಹೆದರಿ ಸುಮ್ಮನಿರಲು ಆಗಲ್ಲ ಎಂದು ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ವಿರುದ್ಧ ವಾಗ್ದಾಳಿ ನಡೆಸಿದರು.

ಚಿತ್ರದುರ್ಗ ನಗರದ ಅವರ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಬಿಎಸ್ ವೈಗಿಂತ ದೊಡ್ಡ ವ್ಯಕ್ತಿ ನಿನ್ನೆ ಬೆಂಬಲಿಗರ ಸಭೆ ನಡೆಸಿದ್ದಾರೆ ಬಿಎಸ್ ವೈ ಹಾಗೂ ನನ್ನ ಬಗ್ಗೆ ಹಗುರವಾಗಿ ಮಾತಾಡಿದ್ದಾರೆ ಇನ್ನು ಮುಂದೆ ನಾನು ಅವನ ಬಗ್ಗೆ ಏಕವಚನದಲ್ಲಿ ಮಾತಾಡುತ್ತೇನೆ ಬಿಎಸ್ ವೈ, ವಿಜಯೇಂದ್ರ ಭೇಟಿಯಾಗಿ ಸುಮಾರು ದಿನಗಳೇ ಆಗಿವೆ ಈ ಹಿಂದೆ ವಿಜಯೇಂದ್ರ ಭೇಟಿಯಾದಾಗ ಈ ಮಹಾ ನಾಯಕನು ಇದ್ದನು ಅವನ ಮಗನಿಗೆ ಟಿಕೆಟ್ ತಪ್ಪಿಸಲು ಅವನೇನು ದೊಡ್ಡ ಲೀಡರ್ ಅಲ್ಲ ಕೋಲಾರದಲ್ಲಿ ಜೆಡಿಎಸ್ ಜತೆ ನಮ್ಮ ಪಕ್ಷದ ಹೊಂದಾಣಿಕೆ ಆಗಿದೆ ಚಿತ್ರದುರ್ಗ ಸಂಸದ ನಾರಾಯಣಸ್ವಾಮಿ ಸ್ಪರ್ಧೆಗೆ ಹಿಂದೇಟು ವರಿಷ್ಠರು ಗೋವಿಂದ ಕಾರಜೋಳಗೆ ಟಿಕೆಟ್ ನೀಡಿದ್ದಾರೆ ಪೋತಪ್ಪ ನಾಯಕನಿಗೆ ಟಿಕೆಟ್ ಸಿಕ್ಕೇ ಸಿಗುತ್ತದೆಂದು ಇರಲಿಲ್ಲ ಈ ಹಿಂದೆ ಎ.ನಾರಾಯಣಸ್ವಾಮಿಗೆ ಟಿಕೆಟ್ ಕೊಡಿಸಿದ್ದೇ ನಾನು ಬಿಜೆಪಿಯಲ್ಲಿ ಈ ಹಿಂದೆಯೇ ರಘುಚಂದನ್‌ಗೆ ಟಿಕೆಟ್ ಭರವಸೆ ನೀಡಿದ್ದರು ಎಂದಿದ್ದಾನೆ ಕೋರ್ ಕಮಿಟಿ ಸಭೆ ನಡೆದಾಗ ನಾನು ಸಹ ಅಲ್ಲಿದ್ದೆನು ಕ್ಷೇತ್ರದಲ್ಲಿ ಮತಗಳ ಕಾಂಬಿನೇಷನ್ ಬಗ್ಗೆ ನಾನು ಹೇಳಿದ್ದೆನು ಆ ಸಭೆಯಲ್ಲಿ ಪೋತಪ್ಪ ನಾಯಕ ಮಾಜಿ ಶಾಸಕನೂ ಇದ್ದನು ಎಂದರು.

ಚಿತ್ರದುರ್ಗದಲ್ಲಿ ಜನತಾ ಬಜಾರ್ ಎಂದು ಇತ್ತು ಅಲ್ಲಿ ಕೈಕಾಲು ಹಿಡಿದು ಸಕ್ಕರೆ ಸೀಮೆ ಎಣ್ಣೆ ತೂಗಲು ಇವನು ಸೇರಿಕೊಂಡಿದ್ದನು ಎರಡೂರು ನ್ಯಾಯ ಬೆಲೆ ಅಂಗಡಿ ಮಾಡಿಕೊಂಡಿದ್ದನು ಸೀಮೆ ಎಣ್ಣೆ ಹಂಚುತ್ತಿದ್ದೇನೆಂದು ಜನರ ಬಳಿ ಹೇಳುತ್ತಿದ್ದನು 1979ರಲ್ಲಿ ಪುರಸಭೆಗೆ ಸ್ಪರ್ಧಿಸಿ ಠೇವಣಿ ಕಳೆದುಕೊಂಡಿದ್ದನು 2023ರ ಚುನಾವಣೆಯಲ್ಲಿ ಚಿತ್ರದುರ್ಗದಲ್ಲಿ ಕೈ ಅಭ್ಯರ್ಥಿ ಪರ ಕೆಲಸ ಯಾರೋ ದೊಡ್ಡ ವ್ಯಕ್ತಿಗೆ ಐವತ್ತು ಲಕ್ಷ ಕೊಡಿಸಲು ಪ್ರಯತ್ನಿಸಿದ್ದನು ಹಿಂದೆ ಕೆಟ್ಟದಾಗಿ ಬೈಯುವುದು ಮುಂದೆ ಕಾಲು ಮುಗಿಯುವ ಕೆಲಸ ದೊಡ್ಡ ಉಳ್ಳಾತಿ ಸ್ಟಗ್ರಾಮದಲ್ಲೇ ಅವನಿಗೆ ಯಾರೂ ಮಾತಾಡಿಸಲ್ಲ ಅವನು ಸತ್ತರೆ 20ಸಾವಿರ ಜನ, ನಾನು ಸತ್ತರೆ 4ಜನ ಸೇರಲ್ಲ ಅಂದಿದ್ದಾನೆ ಅದನ್ನು ಹೇಗೆ ನಾವು ಟ್ರೈಲರ್ ನೋಡುವುದು ಈಗ ಎಂದು ವ್ಯಂಗ್ಯ ಅನೇಕರ ಬಳಿ ಕಾಲೇಜು ಸರ್ಟಿಫಿಕೇಟ್ ವಿಚಾರಕ್ಕೆ ಹಣ ಕೇಳಿದ್ದಾನೆ ಅಂಥವರು ಇವನು ಸತ್ತಾಗ ಬೈಯಲು ಬರಬಹುದು ಎಂದು ವ್ಯಂಗ್ಯವಾಡಿದರು.

ಬಿಎಸ್ ವೈ, ಬಿ ಎಲ್ ಸಂತೋಷ ಭರವಸೆ ನೀಡಿದ್ದರು ಎಂದಿದ್ದಾನೆ ಆದರೆ ನನ್ನ ಪುತ್ರನಿಗೆ ಟಿಕೆಟ್ ಕೊಟ್ಟರೆ ಕೊಡಲಿ ಇಲ್ಲ ಬಿಡಲಿ ಎಂದಿದ್ದನು ಈ ಬಗ್ಗೆ ಅವನು ಎಲ್ಲಿ ಬೇಕಾದರೂ ಪ್ರಮಾಣ ಮಾಡಿ ಹೇಳಲಿ ಬಿಎಸ್ ವೈಗಾಗಿ ಶಾಸಕ ಸ್ಥಾನ ತ್ಯಾಗ ಮಾಡಿದ್ದೆನು ಎಂದಿದ್ದಾನೆ ಬಿಎಸ್ ವೈ ಅವರು ಚಂದ್ರಪ್ಪಗೆ ಕೆಎಸ್ ಆರ್ ಟಿಸಿ ಚೇರ್ ಮೆನ್ ಕೊಟ್ಟಿದ್ದರು ಅವಕಾಶ ಇಲ್ಲದಿದ್ದರು ಸೈರನ್ ಹಾಕಿಕೊಂಡು ಓಡಾಡಿದ್ದನು ಬಿಎಸ್ ವೈ ಆಶೀರ್ವಾದದಿಂದ ಏಖಖಖಿಅ ಚೇರ್ಮನ್ ಆಗಿದ್ದು ಮರೆತಿದ್ದಾನೆ ಎಂದ ತಿಪ್ಪಾರೆಡ್ಡಿಯವರು, ನಿನ್ನೆ ಅವನು ಕರೆದ ಸಭೆಯಲ್ಲಿ ಕೆಲ ಬಿಜೆಪಿ ಬೆಂಬಲಿಗರು ಇದ್ದರು ಅಂತೆಯೇ ಕಾಂಗ್ರೆಸ್ ಪರವಾಗಿ ಕೆಲಸ ಮಾಡಿದವರು ಸಭೆಯಲ್ಲಿದ್ದರು 1994ರಲ್ಲಿ ಪಕ್ಷೇತರ ಶಾಸಕನಾಗಿ ಗೆದ್ದು ಗೃಹಮಂಡಳಿ ಅಧ್ಯಕ್ಷ ಆಗಿದ್ದೆನು ಎರಡನೇ ಸಲವು ಪಕ್ಷೇತರ ಶಾಸಕನಾಗಿ ಗೆದ್ದಿದ್ದೆನು ನಾನು ತಿಪ್ಪಾರೆಡ್ಡಿಗೆ ಎಂಎಲ್ಸಿ ಮಾಡಿದ್ದೆನೆಂದು ಹೇಳುತ್ತಾನೆ ಅಧಿಕ ಲೀಡ್ ನಲ್ಲಿ ನಾನು 2009ರಲ್ಲಿ ಒಐಅ ಆಗಿದ್ದೆನು ಃಎಕ ಒಐಅ ಗಳಿಗೆ ಬೇಕಿದ್ದರೆ ಕೇಳಲಿ ಅವನು ಯಾವತ್ತು ಪಕ್ಷದ ಪರ ಚುನಾವಣೆ ಮಾಡಿಲ್ಲ ಜಿಲ್ಲೆಯಲ್ಲಿ ಎಲ್ಲರೂ ಸೋತು ನಾನು ಗೆದ್ದರೆ ಮಂತ್ರಿ ಆಗುತ್ತೇನೆ ಎಂಬ ಭಾವನೆ ಅವನಲ್ಲಿದೆ ಎಂದಿದರು. ಹೊಳಲ್ಕೆರೆ ಬಿಜೆಪಿ ಪ್ರಭಾವವಿರುವ ಕ್ಷೇತ್ರ ಅಲ್ಲಿ ಯಾರು ಸ್ಪರ್ಧಿಸಿದರೂ ಬಿಜೆಪಿ ಗೆಲ್ಲುತ್ತದೆ ನನಗೆ ಜೆ ಹೆಚ್ ಪಟೇಲರು ಒಮ್ಮೆ ಹೇಳಿದ್ದರು ಬೆಳಗ್ಗೆ ನನ್ನ ಬಳಿ ಬಂದು ನನಗೆ ತುಂಬಾ ಹೊಗಳುತ್ತಾನೆ ಸಂಜೆ ದೇವೇಗೌಡರ ಬಳಿ ಹೋಗಿ ನನ್ನ ತೆಗಳುತ್ತಾನೆ ಎಂದಿದ್ದರು ಪುತ್ರನಿಗೆ ಲೋಕಸಭೆ ಟಿಕೆಟ್ ಗಾಗಿ ನನ್ನ ಜತೆ ರಾಜಿಗೆ ಪ್ರಯತ್ನಿಸಿದ್ದನು ಹೊಳಲ್ಕೆರೆ ಮಂಡಲ ಅಧ್ಯಕ್ಷ ಸಿದ್ದೇಶ್ ಗೆ ಕಳಿಸಿದ್ದನು ಜೋಗಿಮಟ್ಟಿಯಲ್ಲಿ ಪಾರ್ಟಿಗೆ ಸೇರೋಣ ಎಂದು ಹೇಳಿ ಕಳಿಸಿದ್ದನು ನಾನು ಭೇಟಿಗೆ ನಿರಾಕರಿಸಿ ವಾಪಸ್ ಕಳಿಸಿದ್ದೆನು ಅವನು ನನಗೆ ಎಂಎಲ್ ಎ, ಎಂಎಲ್ಸಿ ಮಾಡುವುದಾದರೆ ನನಗೆ ಎಂಎಲ್ಎಗಿರಿನೇ ಬೇಡ ಬಿಜೆಪಿ ಕಚೇರಿ ಮೊಟ್ಟೆ, ಕಲ್ಲು ಹೊಡೆದರೆ ಮುಗಿಯಲ್ಲ ನಾನು ಅವನಿಗಿಂತ ಎರಡು ಸಲ ಹೆಚ್ಚು ಗೆದ್ದಿದ್ದೇನೆ ಎರಡು ಸಲ ಪಕ್ಷೇತರವಾಗಿ ಗೆದ್ದು ಶಾಸಕನಾಗಿದ್ದೇನೆ ನಮ್ಮ ಬಿಜೆಪಿ ಪಕ್ಷದ ಅಭ್ಯರ್ಥಿ ಗೆಲುವು ಸಾಧಿಸುತ್ತಾರೆ ಎಂದು ಭವಿಷ್ಯ ನುಡಿದರು.

ರಾಷ್ಟ್ರೀಯ ವಿಚಾರಗಳ ಆಧಾರದ ಮೇಲೆ ಚುನಾವಣೆ ನಡೆಯುತ್ತದೆ ವಿಜಯೇಂದ್ರ ಕಾಲಿಡದೇ ಏಖಖಖಿಅ ಚೇರ್ ಮೆನ್ ಆಗಿದ್ದನು ಅವನು ನನ್ನ ಮಗನ ಟಿಕೆಟ್ ತಪ್ಪಿಸಿದವರ ಮಕ್ಕಳಿಗೂ ತೊಂದರೆ ಅಂದಿದ್ದಾನೆ ಅವನು ಶಾಪ ಹಾಕುತ್ತಿದ್ದಾನೆ, ಅವನು ಹೇಳಿದಂತೆ ಆಗುತ್ತದಾ ಎಂದು ವ್ಯಂಗ್ಯವಾಡಿ ರಾಜಕೀಯವಾಗಿ ಪಕ್ಷ ಸೋತರೂ ಪರವಾಗಿಲ್ಲ, ವರಿಷ್ಠರು ಗಮನಿಸುತ್ತಾರೆ ಪಕ್ಷ ವಿರೋಧಿಗಳ ಬಗ್ಗೆ ಪಕ್ಷದ ವರಿಷ್ಠರು ಗಮನಹರಿಸುತ್ತಾರೆ ಎಂದು ತಿಪ್ಪಾರೆಡ್ಡಿ ತಿಳಿಸಿದರು.

ಗೋಷ್ಠಿಯಲ್ಲಿ ಕೋರೆವೆಟ್ಟಿ ದ್ಯಾಮಣ್ಣ, ಮಾಳಪ್ಪನ ಹಟ್ಟಿ ಈಶ್ವರಪ್ಪ, ಕವನ, ಅರುಣ್, ಮೈಲಾರಪ್ಪ, ಲೋಕೇಶ್, ಸುರೇಶ್, ರಾಮಣ್ಣ, ರವಿ ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

ನಿಯಮಬಾಹಿರ ಮದ್ಯ ಮಾರಾಟ: ಪ್ರಕರಣ ದಾಖಲು

» ಚಿತ್ರದುರ್ಗ

ನಿಯಮಬಾಹಿರವಾಗಿ ಮದ್ಯ ಮಾರಾಟ ಮಾಡುತ್ತಿದ್ದ ಚಿತ್ರದುರ್ಗ ನಗರ ಜೆ.ಸಿ.ಆರ್. ಬಡಾವಣೆಯ ಕಾರ್ತಿಕ್ ಬಾರ್ ಅಂಡ್ ರೆಸ್ಟೋರೆಂಟ್ ಮಾಲೀಕರ ವಿರುದ್ಧ ಅಬಕಾರಿ ಕಾಯ್ದೆ ಹಾಗೂ ನಿಯಮಗಳ ಅನುಸಾರ ಪ್ರಕರಣ ದಾಖಲು ಮಾಡಲಾಗಿದೆ.ಶುಕ್ರವಾರ ಸಂಜೆ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ನಗರದ ಗಾಂಧಿ ವೃತ್ತ, ಬಸ್ ನಿಲ್ದಾಣ ಸೇರಿದಂತೆ ವಿವಿಧ ಪ್ರದೇಶಗಳ ಬಾರ್, ಎಂ.ಎಸ್.ಐ.ಎಲ್, ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಪಬ್‌ಗಳ ಮೇಲೆ ಅನಿರೀಕ್ಷತ ಭೇಟಿ ನೀಡಿ ತಪಾಸಣೆ ನಡೆಸಿದರು. ಈ ವೇಳೆ ಕಾರ್ತಿಕ್ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ, ಲಾಡ್ಜ್‌ನಲ್ಲಿ ತಂಗಿರುವ ಗ್ರಾಹಕರನ್ನು ಹೊರತು ಪಡಿಸಿ, ಹೊರಗಿನ ಗ್ರಾಹಕರಿಗೂ ಮದ್ಯ ಸರಬಾರಾಜು ಮಾಡುವುದು ಕಂಡು ಬಂದಿತು. ಈ ಹಿನ್ನಲೆಯಲ್ಲಿ ಅಬಕಾರಿ ಕಾಯ್ದೆ 1965ರ 36 ಹಾಗೂ 45 ಕಲಂಗಳು ಹಾಗೂ ಅಬಕಾರಿ ನಿಯಮಗಳ ಕಲಂ 3(7)ಬಿ, ಅಬಕಾರಿ ಪರವಾನಿಗೆ ನಿಯಮದ ಕಲಂ 6 ಅಡಿ ಪ್ರಕರಣ ದಾಖಲಿಸಲಾಗಿದೆ. ಅನಿರೀಕ್ಷತ ತಪಾಸಣೆ ವೇಳೆ ತಹಶೀಲ್ದಾರ್ ಡಾ.ನಾಗವೇಣಿ, ಅಬಕಾರಿ ನಿರೀಕ್ಷಕ ಶೇಕ್ ಇಮ್ರಾನ್, ಉಪತಹಶೀಲ್ದಾರ್ ನಾಗರಾಜ ಉಪಸ್ಥಿತರಿದ್ದರು.

ಎಸ್.ಎಸ್.ಎಲ್.ಸಿ ಪರೀಕ್ಷೆ ನಕಲು: ನಾಲ್ವರು ಶಿಕ್ಷಕರ ಅಮಾನತು

» ಚಿತ್ರದುರ್ಗ

ಶನಿವಾರ ನಡೆದ ಎಸ್.ಎಸ್.ಎಲ್.ಸಿ ವಿಜ್ಞಾನ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ನಕಲು ಮಾಡುವುದನ್ನು ತಡೆಯದೇ, ನಕಲಿಗೆ ಸಹಕರಿಸಿದ ನಾಲ್ವರು ಸಹ ಶಿಕ್ಷಕರನ್ನು ಅಮಾನತು ಮಾಡಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರವಿಶಂಕರ್ ರೆಡ್ಡಿ ಆದೇಶ ಹೊರಡಿಸಿದ್ದಾರೆ. ಚಳ್ಳಕೆರೆ ತಾಲ್ಲೂಕು ಪರುಶುರಾಂಪುರ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಕೊಠಡಿ ಮೇಲ್ವಿಚಾರಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಚಂದ್ರಶೇಖರ್, ಪ್ರಕಾಶ್, ರಾಘವೇಂದ್ರ, ರೇವಣ್ಣ ಅಮಾನತುಗೊಂಡ ಶಿಕ್ಷಕರಾಗಿದ್ದಾರೆ.

ಚುನಾವಣೆ ವೆಚ್ಚ ದೂರುಗಳಿಗೆ ಸಂಪರ್ಕಿಸಿ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆ ವೆಚ್ಚ ವೀಕ್ಷಕರನ್ನಾಗಿ ಭಾರತೀಯ ಕಂದಾಯ ಸೇವೆಯ ಹಿರಿಯ ಅಧಿಕಾರಿ ಪ್ರಜಕ್ತ ಪಿ.ಠಾಕೂರ್ ಅವರನ್ನು ಚುನಾವಣಾ ಆಯೋಗ ನಿಯೋಜಿಸಿದೆ. ಚುನಾವಣೆ ವೆಚ್ಚ ಸಂಬಂಧಿಸಿದ ದೂರುಗಳಿಗೆ ಮೊಬೈಲ್ ಸಂಖ್ಯೆ 9902702673ಕ್ಕೆ ಕರೆ ಮಾಡಬಹುದು. ಚಿತ್ರದುರ್ಗ ಪ್ರವಾಸಿ ಮಂದಿರದಲ್ಲಿ ವೆಚ್ಚ ವೀಕ್ಷಕರನ್ನು ನೇರ ಭೇಟಿಯಾಗಿ ಸಹ ದೂರು ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ವಿವಿಧ ಮಠಗಳಿಗೆ ಬಿಜೆಪಿ ಅಭ್ಯರ್ಥಿ ಕಾರಜೋಳ ಭೇಟಿ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿಗಳಾದ ಗೋವಿಂದ ಕಾರಜೋಳ ರವರು ಇಂದು ಚಿತ್ರದುರ್ಗ ಜಿಲ್ಲೆಯ ವಿವಿಧ ಮಠಗಳು ಹಾಗೂ ದೇವಾಲಯಗಳಿಗೆ ಭೇಟಿ ಮಾಡಿ ದರ್ಶನಾರ್ಶಿವಾದವನ್ನು ಪಡೆದರು.

ಸಿರಿಗೆರೆಯ ಡಾ.ಶಿವಮೂರ್ತಿ ಶಿವಾಚಾರ್ಯ ಶ್ರೀಗಳನ್ನು ಭೇಟಿ ಮಾಡಿ ದರ್ಶನವನ್ನು ಪಡೆದರು ಈ ಸಂದರ್ಭದಲ್ಲಿ ಶ್ರೀಗಳು ಗೋವಿಂದ ಕಾರಜೋಳರವರು ಯಡೆಯೂರಪ್ಪರವರ ಸಚಿವ ಸಂಪುಟದಲ್ಲಿ ನೀರಾವರಿ ಸಚಿವರಾಗಿದ್ದಾಗ ಸಿರಿಗೆರೆಯ ಸುತ್ತಾ–ಮುತ್ತಲ್ಲಿನ ಕೆರೆಗಳಿಗೆ ನೀರನ್ನು ತುಂಬಿಸುವ ಕಾಮಗಾರಿಗೆ 1250 ಕೋಟಿ ರೂ.ಗಳನ್ನು ಒಂದೇ ಬಾರಿಗೆ ಮಂಜೂರು ಮಾಡಿರುವುದನ್ನು ನೆನಪಿಸಿಕೊಂಡರು.

ಇದೇ ಸಮಯದಲ್ಲಿ ಚಿತ್ರದುರ್ಗದ ಉಚ್ಚಂಗಿಯಲ್ಲಮ್ಮ ದೇವಾಲಯ, ನೀಲಕಂಠೇಶ್ವರ ದೇವಾಲಯ, ಜಿಲ್ಲೆಯ ಕಬೀರಾನಂದಾಶ್ರಮ, ಹೂಸದುರ್ಗದ ಕುಂಚಿಟಿಗ ಮಠ, ಭಗೀರಥ ಪೀಠ, ಕಾಗಿನೆಲೆ ಗುರುಪೀಠಕ್ಕೆ ಬೇಟಿ ನೀಡುವುದರ ಮೂಲಕ ಶ್ರೀಗಳ ಹಾಗೂ ದೇವರ ದರ್ಶನವನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರ ಬಿಜೆಪಿ ಅಭ್ಯರ್ಥಿಗಳಾದ ಗೋವಿಂದ ಕಾರಜೋಳ ರವರು ಪಡೆದರು.ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ವಿಧಾನ ಪರಿಷತ್ ಸದಸ್ಯರಾದ ಕೆ.ಎಸ,ನವೀನ್, ಮುಖಂಡರಾದ ಅನಿತ್ ಕುಮಾರ್, ಲಿಂಗಮೂರ್ತಿ, ಪ್ರಧಾನ ಕಾರ್ಯದರ್ಶಿ ಸುರೇಶ್ ಸಿದ್ದಾಪುರ, ದಗ್ಗೆ ಶಿವಪ್ರಕಾಶ್ ಉಪಸ್ಥಿತರಿದ್ದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರ: ಮಾ.30ರಂದು ಒಬ್ಬರು ನಾಮಪತ್ರ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣಾ ಸಂಬಂಧ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದ್ದು, ಮಾರ್ಚ್ 30ರಂದು ಒಬ್ಬ ಅಭ್ಯರ್ಥಿ ನಾಮಪತ್ರ ಸಲ್ಲಿಸಿದ್ದಾರೆ. ಸೋಷಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯೂನಿಸ್ಟ್) ಪಕ್ಷದ ಅಭ್ಯರ್ಥಿಯಾಗಿ ಸುಜಾತ ಡಿ ಅವರು ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಪುಟ 2

ಪ್ರಮುಖ ಸುದ್ದಿ

ಬಿಜೆಪಿ ವಿರುದ್ಧ ಚಿತ್ರದುರ್ಗ ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಕಿಡಿ

ಭಾವನೆ ಕೆರಳಿಸುವುದು ಬಿಟ್ಟು, ಅಭಿವೃದ್ಧಿ ರಾಜಕಾರಣ ಮಾಡಿ

» ಹೊಸದುರ್ಗ



ಪ್ರಧಾನಿ ನರೇಂದ್ರ ಮೋದಿಯವರು ಪದೇ ಪದೇ ಸಬ್ ಕಾ ಸತ್, ಸಬ್ ಕಾ ವಿಕಾಸ್ ಎಂದು ಹೇಳುತ್ತಾರೆ. ಆದ್ರೇ, ಮನುವಾದವನ್ನೇ ಮುಂದುವರೆಸಿದ್ದಾರೆ. ಇದೇನೇ ನಿಮ್ಮ ವಿಕಾಸದ ಹಾದಿ? ಬಿಜೆಪಿಯವರು ಮತ್ತೆತ್ತಿದರೆ ಜಾತಿ ಮತ್ತು ಧರ್ಮ ಎನ್ನುತ್ತಾರೆ. ಜನರ ಭಾವನೆಗಳ ಮೇಲೆ ರಾಜಕಾರಣ ಮಾಡುವುದನ್ನು ಬಿಟ್ಟು, ಅಭಿವೃದ್ಧಿ ಕಾರ್ಯಗಳನ್ನು ಮುಂದಿಟ್ಟು ಕೊಂಡು ರಾಜಕಾರಣ ಮಾಡಿ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಕಿಡಿ ಕಾರಿದರು.

ಪಟ್ಟಣದ ಶ್ರೀದೇವಿ ಕಲ್ಯಾಣ ಮಂಟಪದಲ್ಲಿ ಶನಿವಾರ ಆಯೋಜಿಸಿದ್ದ ಲೋಕಸಭಾ ಕ್ಷೇತ್ರದ ಚುನಾವಣಾ ಪ್ರಚಾರ ಮತ್ತು ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸಂವಿಧಾನ ಮತಷ್ಟು ಬಲಿಷ್ಠ ಗೊಳ್ಳಬೇಕಾದರೆ, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕು. ಹಾಗಾಗಿ, ಪ್ರತಿಯೊಬ್ಬರು ಕಾಂಗ್ರೆಸ್ ಪಕ್ಷದ ಸಿದ್ಧಾಂತದ ಬಗ್ಗೆ, ಅಭಿವೃದ್ಧಿಯ ಬಗ್ಗೆ ಮನ– ಮನೆಗೆ ತಿಳಿಸಬೇಕಿದೆ. 10 ವರ್ಷಗಳ ಹಿಂದೆ ಕಾರ್ಯಕರ್ತರ ಅಭಿಪ್ರಾಯದೊಂದಿಗೆ ಇಲ್ಲಿಗೆ ಪಕ್ಷದ ಅಭ್ಯರ್ಥಿಯಾಗಿ ಬಂದಿದ್ದೆ. ಈ ಜಿಲ್ಲೆಯ ಜನರು 1.ಲಕ್ಷದ 15.ಸಾವಿರ ಮತಗಳ ಅಂತರದಲ್ಲಿ ನನ್ನನ್ನು ಗೆಲ್ಲಿಸಿದ್ದರು. ಈ ಜಿಲ್ಲೆಯ ಜನರ ಋಣವನ್ನು ಎಂದಿಗೂ ಮರಿಯೋಕೆ ಸಾಧ್ಯವಿಲ್ಲ. ಮತ್ತೆ ಬಂದ ಚುನಾವಣೆಯಲ್ಲಿ ನಾನು ಪರಾಭವಗೊಂಡರೂ, ಜಿಲ್ಲೆಯ ಜನರೊಂದಿಗೆ ಸಂಪರ್ಕದಲ್ಲಿದ್ದೆ. ಹಾಗಾಗಿ, ನನಗೆ ಪಕ್ಷ ಟಿಕೆಟ್ ನೀಡಿದೆ. 3ನೇ ಬಾರಿಗೆ ಅಭ್ಯರ್ಥಿಯಾಗಲು ಅವಕಾಶ ಕಲ್ಪಿಸಿ ಕೊಟ್ಟಿದೆ. ಸಂವಿಧಾನ ಒಂದು ಪಕ್ಷದ ಕೈಗೆ ಸಿಲುಕಿ ನಲುಗುತ್ತಿದ್ದು, ದೇಶ ಆರ್ಥಿಕ ಸಂಕಷ್ಟದಲ್ಲಿಸಿಲುಕಿದೆ.ಕಳೆದಚುನಾವಣೆಯ ಪೂರ್ವದಲ್ಲಿ ಬಿಜೆಪಿಯವರು ಪ್ರತಿಯೊಬ್ಬರ

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಫಾಸ್ಟ್ ನ್ಯೂಸ್

ಭಾವನೆ ಕೆರಳಿಸುವುದು ಬಿಟ್ಟು, ಅಭಿವೃದ್ಧಿ ರಾಜಕಾರಣ ಮಾಡಿ

» ಮೊದಲ ಪುಟದಿಂದ

ಕಳೆದ ಚುನಾವಣೆಯಲ್ಲಿ ಜವಾಬ್ದಾರಿ ತೆಗೆದು ಕೊಂಡಂತೆ ಈ ಬಾರಿಯೂ ಮತ ಕೇಳಿ. ಜಾತಿ, ಧರ್ಮದ ಆಧಾರದ ಮೇಲೆ ಮತ ಕೇಳದೆ, ಗ್ಯಾರಂಟಿ ಯೋಜನೆ ಮತ್ತು ಅಭಿವೃದ್ಧಿಗಳ ಮೇಲೆ ಮತ ಕೇಳಿರಿ ಎಂದರು.ಲೋಕಸಭಾ ಚುನಾವಣೆಯಲ್ಲಿ ಪಕ್ಷ ಗೆದ್ದು ಅಧಿಕಾರಕ್ಕೆ ಬಂದರೆ, ಕೇಂದ್ರದಲ್ಲೂ 5 ಶಕ್ತಿ ಯೋಜನೆಗಳು ಜಾರಿಯಾಗಲಿದೆ. ಡಬಲ್ ಗ್ಯಾರಂಟಿಗಳು ಸಿಗಲಿದೆ. ಈಗಾಗಲೇ, ನಮ್ಮ ಎಐಸಿಸಿ ಅಧ್ಯಕ್ಷರು ಹೇಳಿದ್ದಾರೆ. ರಾಜ್ಯ ಸರ್ಕಾರದ ಗ್ಯಾರಂಟಿಯನ್ನು ಜನರಿಗೆ ತಲುಪಿಸಿದ್ದು, ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ, ಕೇಂದ್ರದ ಗ್ಯಾರಂಟಿಗಳನ್ನು ಜನರಿಗೆ ಮುಟ್ಟಿಸುವ ಕೆಲಸ ಮಾಡುತ್ತೇವೆ. ನಮ್ಮ ಅಭಿವೃದ್ಧಿ ಕಾರ್ಯಗಳನ್ನು ಜನರ ಬಾಯಿಗೆ ಹಾಕಬೇಕು. ಕಳೆದ ಬಿಜೆಪಿ ಸರ್ಕಾರ ಸರಿಯಾಗಿ ಕೆಲಸ ಮಾಡಿದ್ದರೆ, ನೀರಿಗೆ ಸಮಸ್ಯೆ ಆಗುತ್ತಿರಲಿಲ್ಲ. ನಾವು ದಾಖಲೆಯನ್ನಿಟ್ಟು ಕೊಂಡು ಮಾತನಾಡುತ್ತೇವೆ ಎಂದು ಹೇಳಿದರು. ಕೆಪಿಸಿಸಿ ಸದಸ್ಯರುಗಳಾದ ಎಂ.ಪಿ. ಶಂಕರ್, ಅಲ್ತಾಫ್ ಪಾಷಾ, ಜಿಲ್ಲಾಧ್ಯಕ್ಷ ತಾಜಪೀರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಪದ್ಮನಾಭ್(ಹೊಸದುರ್ಗ), ಲೋಕೇಶ್ವರಪ್ಪ (ಶ್ರೀರಾಂಪುರ) ಡಿ.ಸಿ.ಸಿ.ಬ್ಯಾಂಕ್ ಉಪಾಧ್ಯಕ್ಷ ಮಂಜುನಾಥ್, ಪುರಸಭೆ ಸದಸ್ಯರುಗಳಾದ ಜಾಫರ್ ಸಾಧಿಕ್, ಶಂಕ್ರಣ್ಣ, ಕಾಂಗ್ರೆಸ್ ಮುಖಂಡರುಗಳಾದ ಜಿ. ಮಂಜುನಾಥ್, ಅಲ್ತಾಫ್ ಪಾಷಾ, ಎಂ.ಪಿ.ಶಂಕರ್, ಮಹಮ್ಮದ್ ಇಸ್ಮಾಯಿಲ್, ತಾಜಪೀರ್, ಗೋ.ತಿಪ್ಪೇಶ್, ಲಿಂಗಪ್ಪ, ರಾಜಣ್ಣ, ಕಾರೇಹಳ್ಳಿ ಬಸವರಾಜ್, ಯಶ್ವಂತ್ ಗೌಡ, ಅಜ್ಜಪ್ಪ, ಬಿ.ಜಿ. ಅರುಣ್, ಕೃಷ್ಣಮೂರ್ತಿ, ಇಸ್ಮಾಯಿಲ್, ಎ.ವಿ. ಅಜ್ಜಪ್ಪ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿದ್ದರು.

ಮಾ.30ರಂದು ಒಬ್ಬರು ನಾಮಪತ್ರ

» ಮೊದಲ ಪುಟದಿಂದ

ಮಾರ್ಚ್ 28 ರಿಂದ ನಾಮಪತ್ರ ಸಲ್ಲಿಕೆ ಪ್ರಾರಂಭವಾಗಿದ್ದು, ಸಾರ್ವತ್ರಿಕ ರಜಾದಿನ ಹೊರತುಪಡಿಸಿ, ಪ್ರತಿ ದಿನ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸ್ವೀಕಾರ ಮಾಡಲಾಗುತ್ತದೆ. ಏಪ್ರಿಲ್ 04 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ.

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆ ವಿಜ್ಞಾನ ವಿಷಯ: 310 ವಿದ್ಯಾರ್ಥಿಗಳು ಗೈರು

» ಚಿತ್ರದುರ್ಗ

ಮಾರ್ಚ್ 30ರಂದು ನಡೆದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯ ವಿಜ್ಞಾನ ವಿಷಯದ ಪರೀಕ್ಷೆಗೆ ಒಟ್ಟು 22122 ವಿದ್ಯಾರ್ಥಿಗಳು ಹಾಜರಾಗಿದ್ದು, 310 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಜಿಲ್ಲೆಯಲ್ಲಿ ವಿಜ್ಞಾನ ವಿಷಯದ ಪರೀಕ್ಷೆಗೆ 22432 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು. ಈ ಪೈಕಿ 22122 ವಿದ್ಯಾರ್ಥಿಗಳು ಹಾಜರಾಗಿ, 310 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ಸಹಾಯವಾಣಿ

» ದಾವಣಗೆರೆ

ದಾವಣಗರೆ ತಾಲ್ಲೂಕಿನ 42 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳನ್ನು ಪರಿಹರಿಸಿ ಸಹಾಯವನ್ನು ಒದಗಿಸಲು ದಾವಣಗರೆ ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಕುಡಿಯುವ ನೀರಿನ ಸಹಾಯಕ್ಕಾಗಿ 7795385484 ದೂರವಾಣಿ ಸ್ಥಾಪಿಸಲಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

ಬೇಸಿಗೆ ಕಬ್ಬಡಿ ತರಬೇತಿ

» ದಾವಣಗೆರೆ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹಾಗೂ ಸೃಷ್ಟಿ ಕಬಡ್ಡಿ ಅಕಾಡೆಮಿ, ಇವರುಗಳ ಸಂಯುಕ್ತಾಶ್ರಯದಲ್ಲಿ ಏ. 5 ರಿಂದ 25 ವರೆಗೆ ಬೆಳಿಗ್ಗೆ 6.30 ರಿಂದ 8.00 ರ ವರೆಗೆ ಮತ್ತು ಸಾಯಂಕಾಲ 5.30 ರಿಂದ 7.30 ರವರೆಗೆ ಜಿಲ್ಲಾ ಕ್ರೀಡಾಂಗಣ ಆವರಣದಲ್ಲಿ ಬೇಸಿಗೆ ಕಬಡ್ಡಿ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಕಬಡ್ಡಿ ತರಬೇತುದಾರರು, ಶೈಲ ಎಸ್, ಮೊ.ನಂ: 9448667255, ರಾಕೇಶ್‌ಮೊ.ನಂ: 9448835907, ಶಿವಯೋಗಿ ಮೊ.ನಂ: 9019619900 ಮತ್ತು ನೂರುಲ್ಲಾ ಮೊ.ನಂ: 9740107364 ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ಜಯಲಕ್ಷೀಬಾಯಿ ತಿಳಿಸಿದ್ದಾರೆ.

ಬಾಬು ಜಗಜೀವನ್ ರಾಂ 117 ನೇ ಜಯಂತಿ

» ದಾವಣಗೆರೆ

ಜಿಲ್ಲಾಢಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರಪಾಲಿಕೆ ಇವರ ಸಹಯೋಗದಲ್ಲಿ ಏಪ್ರಿಲ್ 5 ರಂದು ಬೆಳಗ್ಗೆ 11.30ಕ್ಕೆ ಜಿಲ್ಲಾಡಳಿತ ಭವನದ ತುಂಗಾಭದ್ರ ಸಭಾಂಗಣದಲ್ಲಿ ಡಾ. ಬಾಬು ಜಗಜೀವನ ರಾಂ ರವರ 117 ನೇ ಜಯಂತಿಯನ್ನು ಏರ್ಪಡಿಸಲಾಗಿದೆ

ಸಹಾಯಕ ಚುನಾವಣಾಧಿಕಾರಿ ಎಂ.ಕಾರ್ತಿಕ್ ಎಚ್ಚರಿಕೆ

ನೀತಿ ಸಂಹಿತೆ ಉಲ್ಲಂಘಿಸಿದರೆ ಪರವಾನಿಗೆ ರದ್ದು

» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಇದನ್ನು ಉಲ್ಲಂಘಿಸಿ ವ್ಯಾಪಾರ ವಹಿವಾಟು ನಡೆಸಿದರೆ, ಉದ್ದಿಮೆ ಪರವಾನಿಗೆ ರದ್ದುಗೊಳಿಸುವುದಾಗಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಎಚ್ಚರಿಕೆ ನೀಡಿದರು.

ಇಲ್ಲಿನ ನಗರಸಭೆ ಸಭಾಂಗಣದಲ್ಲಿ ಶನಿವಾರಬ್ಯಾಂಕರ್,ಆಭರಣತಯಾರಕರು, ಮಾರಾಟಗಾರರು, ಹೋಟೆಲ್ ಮತ್ತು ಲಾಡ್ಜ್, ಕಲ್ಯಾಣ ಮಂಟಪ, ಪೆಟ್ರೋಲ್ ಬಂಕ್, ಬಾರ್ ಅಂಡ್ ರೆಸ್ಟೋರೆಂಟ್, ಪ್ರಿಂಟಿಂಗ್ ಪ್ರೆಸ್‌ಗಳ ಮಾಲೀಕರು ಹಾಗೂ ಈ ಸಂಘಗಳ ಅಧ್ಯಕ್ಷರ ಸಭೆ ನಡೆಸಿ ಅವರು ಮಾತನಾಡಿದರು.

ಚುನಾವಣೆ ಸುಗಮವಾಗಿ ನಡೆಯಲು ಎಲ್ಲರೂ ಸಹಕಾರ ನೀಡಬೇಕು. ಯಾವುದೇ ಅಕ್ರಮ ವ್ಯವಹಾರಗಳಿಗೆ ಅವಕಾಶ ನೀಡಬಾರದು. ದಾಸ್ತಾನು, ನಗದು ಹಾಗೂ ನೊಂದಣಿ ಪುಸ್ತಕಗಳನ್ನು ಸರಿಯಾದ ಕ್ರಮದಲ್ಲಿ ನಿರ್ವಹಿಸಬೇಕು. ಚುನಾವಣೆ ಪ್ರಚಾರಕ್ಕೆ ಸಂಬಂಧಿಸಿದಂತೆ ಮುದ್ರಿಸುವ, ಬ್ಯಾನರ್, ಕರಪತ್ರ, ಬಿತ್ತಿಪತ್ರಗಳಲ್ಲಿ ಪ್ರಿಂಟಿಂಗ್ ಪ್ರೆಸ್‌ಗಳ ಹೆಸರು ಹಾಗೂ ಮುದ್ರಣಗೊಂಡ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸಬೇಕು. ಗುರುತಿನ ಚೀಟಿಗಳನ್ನು ಪಡೆದು ವ್ಯಕ್ತಿಗಳು ಲಾಡ್ಜ್‌ಗಳಲ್ಲಿ ಉಳಿದುಕೊಳ್ಳಲು ಅವಕಾಶ ನೀಡಬೇಕು. ಬಾರ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಮದ್ಯ ಮಾರಾಟದ ಮೇಲೆ ಮಿತಿ ಇರಿಸಬೇಕು. ಸಮಯಪಾಲನೆ ಮಾಡಬೇಕು. ಯಾವುದೇ ರಾಜಕೀಯ ಪಕ್ಷ ಹಾಗೂ ಅಭ್ಯರ್ಥಿಗಳೊಂದಿಗೆ ಜೊತೆಗೂಡಿ ಅಕ್ರಮಗಳನ್ನು ಎಸೆಗಬಾರದು. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಕೈಜೋಡಿಸಬೇಕು ಎಂದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ಪೌರಾಯುಕ್ತೆ ಎಂ.ರೇಣುಕಾ, ತಾಪಂ ಇಓ ಹಾಗೂ ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿ ಅನಂತರಾಜು, ಆರಕ್ಷಕ ನಿರೀಕ್ಷಕ ಸುನೀಲ್ ಕುಮಾರ್ ಸೇರಿದಂತೆ ಮತ್ತಿತರು ಇದ್ದರು. ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ: ಚಿತ್ರದುರ್ಗ ತಾಲ್ಲೂಕು ಕಚೇರಿಯಲ್ಲಿ ಶನಿವಾರ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿ ಎಂ.ಕಾರ್ತಿಕ್ ಅವರ ಅಧ್ಯಕ್ಷತೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ ನಡೆಯಿತು. ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಮಾದರಿ ನೀತಿ ಸಂಹಿತೆ ಹಾಗೂ ಚುನಾವಣಾ ಮಾರ್ಗಸೂಚಿಗಳ ಬಗ್ಗೆ ಸಭೆಯಲ್ಲಿದ್ದ ಎಲ್ಲಾ ಸದಸ್ಯರಿಗೆ ತಿಳಿಸಿ, ಚುನಾವಣಾ ಮಾರ್ಗಸೂಚಿಯನ್ವಯ ಸಹಕರಿಸಲು ತಿಳಿಸಲಾಯಿತು. ಈ ಸಂದರ್ಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಇದ್ದರು.

ಮುಕ್ತ ಮನಸ್ಸಿನಿಂದ ಮತ ಚಲಾಯಿಸಿ: ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ.ಎಂ.ವಿ ಕರೆ

ಮೇ.7ರಂದು ತಪ್ಪದೇ ಮತಗಟ್ಟೆಗೆ ಬನ್ನಿ

» ದಾವಣಗೆರೆ

ಲೋಕಸಭಾ ಚುನಾವಣೆ ನಡೆಯುತ್ತಿದ್ದು, ಮೇ.7 ರಂದು ದಾವಣಗೆರೆ ಕ್ಷೇತ್ರಕ್ಕೆ ಮತದಾನ ನಡೆಯಲಿದೆ. ಮತದಾರರು ತಪ್ಪದೇ ಮತಗಟ್ಟೆಗೆ ಬಂದು ಮತಚಲಾಯಿಸಿ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವೆಂಕಟೇಶ್.ಎಂ.ವಿ ಕರೆ ನೀಡಿದರು. ಅವರು ಶುಕ್ರವಾರ ಜಿಲ್ಲಾಡಳಿತ, ಸ್ವೀಪ್ ಸಮಿತಿಯಿಂದ ಜಿಲ್ಲಾಡಳಿತಭವನದಮೆಟ್ಟಿಲುಗಳಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳಿಂದ ಮತದಾರರ ಜಾಗೃತಿ ಅಂಗವಾಗಿ ಏರ್ಪಡಿಸಿದ ಕ್ಯಾಂಡಲ್ ಲೈಟ್ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು.ಚುನಾವಣೆಯಲ್ಲಿ ಮತದಾರರು ಯಾವುದೇ ಆಸೆ, ಅಮಿಷಗಳಿಗೆ ಒಳಗಾಗದೇ ನಿರ್ಮಲ ಮನಸ್ಸಿನಿಂದ ಮತ ಚಲಾಯಿಸಬೇಕು. ತಮ್ಮ ಒಂದು ಮತ ದೇಶದ ಸುಭದ್ರತೆಗೆ ದಾರಿ ದೀಪವಾಗಲಿದೆ. ಇದರಿಂದ ಒಮ್ಮತ ಅಭಿಪ್ರಾಯದ ಸರ್ಕಾರ ರಚನೆಯಾಗುವುದರೊಂದಿಗೆ ಸರ್ವರ ಒಳಿತು ಇದರಲ್ಲಿ ಅಡಗಿರುತ್ತದೆ ಎಂದು ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ. ಇಟ್ನಾಳ್ ಅವರು ಮಾತಾನಾಡಿ, 18 ನೇ ಲೋಕಸಭಾ ಚುನಾವಣೆ ನಡೆಯುತ್ತಿದ್ದು, ಇಲ್ಲಿಯವರೆಗೂ ನಡೆದ ಚುನಾವಣೆಗಿಂತಲೂ ಮೇ 7 ರಂದುನಡೆಯುವಚುನಾವಣೆಯಲ್ಲಿ ಹೆಚ್ಚಿನ ಮತದಾನ ಮಾಡುವಂತೆ ಜಾಗೃತಿ ಮೂಡಿಸುವುದು ನಮ್ಮ ಗುರಿಯಾಗಿದೆ. ಎಲ್ಲರೊಳಗೊಂಡ ಸರ್ಕಾರ ರಚನೆಯಾಗಲು ಎಲ್ಲಾ ಮತದಾರರು ತಪ್ಪದೇ ಮತದಾನ ಮಾಡುವ ಮೂಲಕ ತಮ್ಮ ಜವಾಬ್ದಾರಿಯನ್ನು ನಿಭಾಯಿಸಲು ಮನವಿ ಮಾಡಿದರು. ತಾ ಪಂಚಾಯಿತಿ ಜಿ.ಪಂ ಉಪ ಕಾರ್ಯದರ್ಶಿ ಕೃಷ್ಣನಾಯ್ಕ್, ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂಜಿಲ್ಲಾಮಟ್ಟದಅಧಿಕಾರಿಗಳು ಕ್ಯಾಡಂಲ್ ಲೈಟ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಕೊಡ ಮಾಡುವ ಕೆಯುಡಬ್ಲ್ಯೂಜೆಯ 'ಎಂ. ನಾಗೇಂದ್ರರಾವ್ ದತ್ತಿನಿಧಿ ಪ್ರಶಸ್ತಿ'ಗೆ ಆಯ್ಕೆಯಾಗಿರುವ ದಾವಣಗೆರೆ ಕನ್ನಡಿಗ ಪತ್ರಿಕೆಯ ಸಂಪಾದಕ ಆರ್.ರವಿ ಅವರಿಗೆ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ವತಿಯಿಂದ ಸನ್ಮಾನಿಸಲಾಯಿತು.

ಶಿಕ್ಷಕರಾಗಿ ಕೆಲಸ ಮಾಡುವುದೇ ಪುಣ್ಯ: ಎನ್.ಎಸ್. ವೆಂಕಟೇಶ್



» ಹೊಸದುರ್ಗ

ಜಗತ್ತಿನಲ್ಲಿ ಗುರುವೆಂಬ ಎರಡಕ್ಷರದ ಸ್ಥಾನ ಬಹಳ ದೊಡ್ಡದು. ಅಜ್ಞಾನ ಮತ್ತು ಅಂಧಕಾರವನ್ನು ಹೋಗಲಾಡಿಸಿ, ಸುಜ್ಞಾನದ ಕಡೆಗೆ ಮಕ್ಕಳನ್ನು ಕರೆತರುವ ಶ್ರೇಷ್ಠ ವೃತ್ತಿ. ಎಲ್ಲರಿಗೂ ಶಿಕ್ಷಕರಾಗಿ ಕೆಲಸ ಮಾಡುವ ಅವಕಾಶಗಳು ದೊರೆಯುವುದಿಲ್ಲ. ಶಿಕ್ಷಕರಾದವರು ವೃತ್ತಿಗೆ ಗೌರವ ತರುವಂತೆ ಕೆಲಸ ಮಾಡಬೇಕು. ಶಿಕ್ಷಕರಾಗಿ ಕೆಲಸ ಮಾಡಿವುದೇ ಒಂದು ಪುಣ್ಯವೆಂದು ನಿವೃತ್ತಿಗೊಂಡ ಶಿಕ್ಷಕ ಎನ್.ಎಸ್.ವೆಂಕಟೇಶ್ ಹೇಳಿದರು. ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಶನಿವಾರ ಶಾಲೆ ಮತ್ತು ಶಿಕ್ಷಕರ ವತಿಯಿಂದ ತಮಗೆ ಆಯೋಜಿಸಿದ್ದ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಶಿಕ್ಷಕ ಎಂಬ ಪದವೇ ಅತ್ಯದ್ಭುತ. ಸದೃಢ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ಶಿಕ್ಷಕರ ಪಾತ್ರ ಬಹಳಷ್ಟಿದೆ. ಶಿಕ್ಷಕರಾದವರು ಬಹಳ ಜಾಗೃತರಾಗಿರಬೇಕು. ನಾವು ಹೇಗಿರುತ್ತೇವೋ, ಹಾಗೆಯೇ ಮಕ್ಕಳು ಇರುತ್ತಾರೆ. ನಮ್ಮ ಮಾತು ನಡೆ–ನುಡಿ ಅನುಸರಿಸುತ್ತಾರೆ. ಮಾದರಿ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬೇಕು. ನಾವು ಅಕ್ಷರ ಹೇಳಿಕೊಟ್ಟಂತಹ ವಿದ್ಯಾರ್ಥಿಗಳು ಒಳ್ಳೆಯ ಹುದ್ದೆಗಳನ್ನು ಪಡೆದು ಸಮಾಜದಲ್ಲಿ ಗೌರವಾನ್ವಿತ ವ್ಯಕ್ತಿಗಳಾಗಿ ಬದುಕಿದಾಗ, ಅವರ ತಂದೆ ತಾಯಿ ಅಷ್ಟೇ ಶಿಕ್ಷಕರಾದ ನಾವುಗಳು ಕೂಡ ಸಂತೋಷ ಪಡುತ್ತೇವೆ. ನಮ್ಮ ಸೇವಾ ಅವಧಿಯಲ್ಲಿ ಸಾಕಷ್ಟು ವಿದ್ಯಾರ್ಥಿಗಳಿಗೆ ಅಕ್ಷರಭ್ಯಾಸ ಮಾಡಿಸಿದ್ದೇವೆ. ಅದೆಷ್ಟೋ ವಿದ್ಯಾರ್ಥಿಗಳು ಸಿಕ್ಕಾಗ ಪ್ರೀತಿಯಿಂದ, ಗೌರವದಿಂದ ಮಾತನಾಡಿಸುತ್ತಾರೆ. ನಮಗೆ ಅಷ್ಟೇ ಸಾಕು. ಅಷ್ಟು ವಿದ್ಯಾರ್ಥಿಗಳ ಪ್ರೀತಿ ಮತ್ತು ವಿಶ್ವಾಸವನ್ನು ನಾವು ಗಳಿಸಿರುವುದೇ ನಮ್ಮ ಆಸ್ತಿ ಹೇಳಿದರು. ಇದೇ ಸಂದರ್ಭದಲ್ಲಿ ಶಾಲೆ ವತಿಯಿಂದ ನಿವೃತ್ತಗೊಂಡ ಶಿಕ್ಷಕ ಎನ್.ಎಸ್. ವೆಂಕಟೇಶ್ ಮತ್ತು ಅವರ ಪತ್ನಿಗೆ ಸನ್ಮಾನಿಸಿ ಗೌರವಿಸಿ, ನಿಮ್ಮ ಮುಂದಿನ ಜೀವನ ಸುಖಕರವಾಗಿರಲಿ ಎಂದು ಶುಭ ಹಾರೈಸಲಾಯಿತು. ಈ ವೇಳೆ ಕಾಲೇಜು ಉಪ ಪ್ರಾಂಶುಪಾಲರು, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಶಿಕ್ಷಕರು ಹಾಗೂ ಶಾಲಾ ಸಿಬ್ಬಂದಿಗಳಿದ್ದರು.

ಪೋಲಿಸ್ ಧ್ವಜ ದಿನಾಚರಣೆ

ಚಿತ್ರದುರ್ಗ: ಏ.2 ರಂದು ಬೆಳಿಗ್ಗೆ 8 ಗಂಟೆಗೆ ನಗರದ ಡಿ.ಎ.ಆರ್ ಪೋಲಿಸ್ ಕವಾಯತು ಮೈದಾನದಲ್ಲಿ ಕರ್ನಾಟಕ ರಾಜ್ಯ ಪೋಲಿಸ್ ಧ್ವಜ ಹಾಗೂ ಕಲ್ಯಾಣ ದಿನಾಚರಣೆ ಆಚರಿಸಲಾಗುವುದು. ಮುಖ್ಯ ಅತಿಥಿಯಾಗಿ ನಿವೃತ್ತ ಎಆರ್‌ಎಸ್‌ಐ ಆರ್.ಟಿ.ರವಿಕುಮಾರ್ ಆಗಮಿಸಿ ಗೌರವ ವಂದನೆ ಸ್ವೀಕರಿಸುವರು. ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಭಾಗವಹಿಸುವರು ಎಂದು ಪೋಲಿಸ್ ಅಧೀಕ್ಷಕ ಧರ್ಮೇಂದರ್ ಕುಮಾರ್ ಮೀನಾ ತಿಳಿಸಿದ್ದಾರೆ.

ಪ್ರಮುಖ ಸುದ್ದಿ

ಪತ್ರಿಕೆಗಳಿಗೆ ಜಾಹೀರಾತು ನೀಡಲು ಕೋರಿ ಡಿಸಿಗೆ ಮನವಿ

» ದಾವಣಗೆರೆ

ಲೋಕಸಭಾ ಚುನಾವಣೆ ಪ್ರಯುಕ್ತ ಮತದಾರರಲ್ಲಿ ಜಾಗೃತಿ, ಅರಿವು ಮೂಡಿಸುವ, ಮತ ಚಲಾವಣೆಯ ಕುರಿತು ಜಾಹೀರಾತುಗಳನ್ನು ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ ಮಾಡುವಂತೆ ಕೋರಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ(ರಿ)ಬೆಂಗಳೂರು ಇದರದಾವಣಗೆರೆ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿಗಳ ಪರವಾಗಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಬಾನು ಎಸ್ ಬಳ್ಳಾರಿ ಅವರಿಗೆ ಗುರುವಾರ ಮನವಿಪತ್ರ ಸಲ್ಲಿಸಲಾಯಿತು.

ಜಿಲ್ಲಾಧಿಕಾರಿಗಳ ಪರವಾಗಿ ಮನವಿ ಸ್ವೀಕರಿಸಿ ಮಾತನಾಡಿದ ಎಡಿಸಿ ಅವರು ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತರುವುದಾಗಿ ಹೇಳಿದರು. ಇದೇ ತಿಂಗಳ 16ರಂದು ಲೋಕಸಭಾ ಚುನಾವಣೆಯ ವೇಳಾಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗದಿಂದ ಮತ್ತು ರಾಜ್ಯ ಚುನಾವಣಾ ಆಯೋಗದಿಂದ ರಾಜ್ಯದಲ್ಲಿ ಅಧಿಕೃತವಾಗಿ ಘೋಷಣೆ ಮಾಡಿ ಅಧಿಸೂಚನೆ ಹೊ

ಫಾಸ್ಟ್ ನ್ಯೂಸ್

ಚಿತ್ರದುರ್ಗ ಜಿಲ್ಲೆಯ ಸಮಗ್ರ ಅಭಿವೃದ್ಧಿಯೇ ನನ್ನ ಗುರಿ

ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಹೇಳಿಕೆ

» ಹೊಸದುರ್ಗ

ಮಧ್ಯ ಕರ್ನಾಟಕದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ನನ್ನನ್ನು ಪಕ್ಷದ ವರಿಷ್ಠರು ಆಯ್ಕೆ ಮಾಡಿದ್ದಾರೆ. ಚಿತ್ರದುರ್ಗ ಕ್ಷೇತ್ರ ಅಭಿವೃದ್ಧಿ ವಂಚಿತವಾಗಿದ್ದು, ಅಕ್ಕ ಪಕ್ಕದ ದಾವಣಗೆರೆ, ಶಿವಮೊಗ್ಗ, ಹಾಸನ, ತುಮಕೂರು, ಚಿಕ್ಕಮಗಳೂರು ಜಿಲ್ಲೆಗಳು ಸಾಕಷ್ಟು ಅಭಿವೃದ್ಧಿ ಹೊಂದಿವೆ. ಆದರೆ, ಚಿತ್ರದುರ್ಗ ಮಾತ್ರ ಅಭಿವೃದ್ಧಿ ಹೊಂದದೇ ಹಿಂದುಳಿದಿದೆ. ಈ ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವುದು ನನ್ನ ಗುರಿಯಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಮತ್ತು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ಹೇಳಿದರು. ಪಟ್ಟಣದಲ್ಲಿ ಶನಿವಾರ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರನ್ನು ಭೇಟಿ ಮಾಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿತ್ರದುರ್ಗ ಜಿಲ್ಲೆ ಅತ್ಯಂತ ಶ್ರೇಷ್ಠ ರಾಜಕಾರಣಿ ದಿವಂಗತ ಎಸ್.ನಿಜಲಿಂಗಪ್ಪನವರ ಜನ್ಮಭೂಮಿ ಮತ್ತು ಕರ್ಮ ಭೂಮಿಯಾಗಿದೆ. ಅವರು ಮುಖ್ಯಮಂತ್ರಿ ಆದಾಗಿನಿಂದಲೂ, ಅವರಿಗೆ ಅನೇಕ ಸ್ಥಾನಮಾನಗಳು ದೊರೆತಿದ್ದರೂ ಕೂಡ ಅಭಿವೃದ್ಧಿಯಲ್ಲಿ ಹಿನ್ನಡೆಯಾಗಿದೆ. ಭಾರತ ದೇಶ ಹಳ್ಳಿಗಳಿಂದ ತುಂಬಿರುವ ದೇಶವಾಗಿದ್ದು, ಇಲ್ಲಿ ಒಕ್ಕಲುತನವೇ ಪ್ರಧಾನವಾಗಿದೆ. ಇಲ್ಲಿನ ರೈತರಿಗೆ ಅನುಕೂಲವಾಗಬೇಕಾದರೆ, ನೀರಾವರಿ ಆಗಬೇಕು. ಗ್ರಾಮೀಣ ಪ್ರದೇಶ ಮತ್ತು ಬಡವರ ಮಕ್ಕಳಿಗೆ ಮತ್ತಷ್ಟು ಶಿಕ್ಷಣ ಕೊಡುವ ವ್ಯವಸ್ಥೆ ಆಗಬೇಕು. ಸ್ಥಳೀಯವಾಗಿ ಸಾಕಷ್ಟು ಉದ್ಯೋಗ ಸೃಷ್ಟಿಯಾಗಬೇಕಿದೆ. ಈ ನಿಟ್ಟಿನಲ್ಲಿ ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕೆಂಬ ಸದುದ್ದೇಶದಿಂದ ಚುನಾವಣೆಗೆ ಸ್ಪರ್ಧಿಸಿರುವೆ. ಚುನಾವಣೆಯಲ್ಲಿ ಗೆಲುವು ಪಡೆದ ನಂತರ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ತಜ್ಞರನ್ನ ಕರೆದು ಯಾವ ರೀತಿಯಾಗಿ ಅಭಿವೃದ್ಧಿ ಕಾರ್ಯಗಳು ನಡೆಯಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಿ, ಕೆಲಸ ಮಾಡುವೆ ಎಂದರು. ಸಿದ್ದರಾಮಯ್ಯನವರಿಗೆ ಗರ್ವದಿಂದ ಮಾತನಾಡುವುದನ್ನು ಬಿಟ್ಟರೆ, ಏನು ಗೊತ್ತಿಲ್ಲ. ಮೊದಲು ಅವರ ಗರ್ವಭಂಗವಾಗಬೇಕು. ರಾಜ್ಯದಲ್ಲಿ ನೀರಾವರಿಗೆ ಬಹಳ ಪ್ರಾಮಾಣಿಕವಾಗಿ ಒತ್ತು ನೀಡಿದ್ದರೆ, ಕೃಷ್ಣ ಮತ್ತು ಕಾವೇರಿ ನದಿಗೆ ಒತ್ತುಕೊಟ್ಟಿದ್ದರೆ, ಅದು ಮಾಜಿ ಪ್ರಧಾನಿ ದೇವೇಗೌಡರು. ಅವರ ಕೈಯಿಂದಲೇ ಬಹಳಷ್ಟು ಅಭಿವೃದ್ಧಿ ಕಾಮಗಾರಿಗಳು ಆರಂಭವಾಗಿವೆ. ಕಾಂಗ್ರೆಸ್ ನವರು ಆಗ ಅವರ ಮೇಲೆ ಆರೋಪ ಮಾಡಿದರು. ಕಾಂಗ್ರೆಸ್ ಪಕ್ಷದವರಿಗೆ ಆರೋಪ ಮಾಡುವುದನ್ನು ಬಿಟ್ಟರೆ, ಏನು ಗೊತ್ತಿಲ್ಲ ಎಂದು ಕಿಡಿಕಾರಿದರು. ಹೊಳಲ್ಕೆರೆಯ ಬಿಜೆಪಿ ಶಾಸಕ ಎಂ.ಚಂದ್ರಪ್ಪ ನಿಮ್ಮ ಸ್ಪರ್ಧೆಗೆ ಅಪಸ್ವರ ತೆಗೆಯುತ್ತಿದ್ದು, ಇದನ್ನು ಯಾವ ರೀತಿಯಾಗಿ ಸರಿಪಡಿಸಿಕೊಳ್ಳುವಿರಿ ಎಂಬ ಮಾಧ್ಯಮದ ಪ್ರಶ್ನೆಗೆ ಪ್ರತಿಕ್ರಿಯಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಆಗುತ್ತಿರುವ ಬೆಳವಣಿಗೆಯನ್ನು ಹೈಕಮಾಂಡ್ ಗಮನಿಸುತ್ತಿದೆ. ಯಡಿಯೂರಪ್ಪ ಮತ್ತು ಪಕ್ಷದ ವರಿಷ್ಠರು ನೀರು ಕುಡಿದಷ್ಟು ಸುಲಭವಾಗಿ ಸಮಸ್ಯೆಯನ್ನು ಬಗೆಹರಿಸುತ್ತಾರೆ. ನನಗೆ ಯಾವುದೇ ಸಮಸ್ಯೆ ಆಗಲಾರದು. ಚುನಾವಣೆಯಲ್ಲಿ ಗೆದ್ದು, ಸಂಸತ್ತಿನಲ್ಲಿ ನಿಮ್ಮ ಧ್ವನಿಯಾಗಿ ಕೆಲಸ ಮಾಡುವೆ ಎಂದು ಹೇಳಿದರು. ಈ ವೇಳೆ ಬಿಜೆಪಿ ಪಕ್ಷದ ಮುಖಂಡರು ಹಾಗೂ ನೂರಾರು ಕಾರ್ಯಕರ್ತರಿದ್ದರು.

ಯೋಗ ಶಿಬಿರ

» ದಾವಣಗೆರೆ

ಆಫೀಸರ್ಸ್ ಕ್ಲಬ್, ದಾವಣಗೆರೆ, ಜಿಲ್ಲಾ ಯೋಗ ಒಕ್ಕೂಟ ಇವರ ಸಂಯುಕ್ತಾಶ್ರಾಯದಲ್ಲಿ ನಗರದ ಎಸ್.ಎಸ್.ಲೇಔಟ್ ಹತ್ತಿರ, ರಿಂಗ್ ರಸ್ತೆಯಲ್ಲಿ ಏ.1 ರಿಂದ 15 ರವರೆಗೆ ಬೆಳಿಗ್ಗೆ 6.15 ರಿಂದ ಯೋಗ ಶಿಬಿರ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಉದ್ಘಾಟಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮುಖ್ಯ ಅತಿಥಿಗಳಾಗಿ ಭಾಗವಹಿಸಸಲಿದ್ದು ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷರಾದ ಲಯನ್ ವಾಸುದೇವ್ ರಾಯ್ಕರ್ ಅಧ್ಯಕ್ಷತೆ ವಹಿಸುವರು. ಹೆಚ್ಚಿನ ಮಾಹಿತಿಗೆ 8197843543, 9035551568 ಗೆ ಸಂಪರ್ಕಿಸಲು ತಿಳಿಸಲಾಗಿದೆ.

ಏ. 1 ಮತ್ತು 2 ರಂದು ಅಂಚೆ ಕಚೇರಿಗಳಲ್ಲಿ ಬ್ಯಾಂಕಿಂಗ್ ಸೇವೆ ಲಭ್ಯವಿರುವುದಿಲ್ಲ

» ದಾವಣಗೆರೆ

ಅಂಚೆ ಕಚೇರಿಗಳಲ್ಲಿ ವರ್ಷಾಂತ್ಯದ ಲೆಕ್ಕಾಚಾರಗಳು ಮತ್ತು ಬಡ್ಡಿ ಲೆಕ್ಕಾಚಾರಗಳು ನಡೆಯಲಿರುವುದರಿಂದ ಏ.1 ಮತ್ತು 2 ರಂದು ಅಂಚೆ ವಿಭಾಗದ ಯಾವುದೇ ಅಂಚೆಯಲ್ಲಿ ಉಳಿತಾಯ ಖಾತೆಗಳಿಗೆ ಸಂಬಂಧಿಸಿದಂತೆ ವ್ಯವಹಾರ, ಬ್ಯಾಂಕಿಂಗ್ ಸೇವೆ ಇರುವುದಿಲ್ಲ. ಇದನ್ನು ಹೊರತುಪಡಿಸಿ ಪತ್ರದ ಅಂಚೆ ಸೇವೆ, ಎಟಿಎಂ ಸೇವೆ ನಿರಂತರವಾಗಿರುತ್ತದೆ.

ಮತದಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಕರೆ: ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್

ಮತದಾನ ಜಾಗೃತಿಗೆ ವಾಕಥಾನ್ ಆಯೋಜನೆ

» ಚಿತ್ರದುರ್ಗ

ಪ್ರಜಾಪ್ರಭುತ್ವದ ಅತಿದೊಡ್ಡ ಹಬ್ಬ ಚುನಾವಣೆ. ಈ ರಾಷ್ಟ್ರೀಯ ಹಬ್ಬದಲ್ಲಿ ಜಿಲ್ಲೆಯ ಎಲ್ಲಾ ಅರ್ಹ ನೋಂದಾಯಿತ ಮತದಾರರು ಏಪ್ರಿಲ್ 26ರಂದು ತಮ್ಮ ಸಮೀಪದ ಮತಗಟ್ಟೆಗೆ ತೆರಳಿ ಯಾವುದೇ ಆಸೆ, ಆಮಿಷಗಳಿಗೆ ಬಲಿಯಾಗದೇ ನಿರ್ಭೀತಿಯಿಂದ ಮತ ಚಲಾಯಿಸಿ, ಸಮರ್ಥ ಜನನಾಯಕನ ಆಯ್ಕೆಯಲ್ಲಿ ಭಾಗೀದಾರರಾಗುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್.ಜೆ. ಸೋಮಶೇಖರ್ ಅವರು ಹೇಳಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಚುನಾವಣಾ ಶಾಖೆ, ಜಿಲ್ಲಾ ಪಂಚಾಯತ್, ನಗರಸಭೆ ಚಿತ್ರದುರ್ಗ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲಾ ವ್ಯವಸ್ಥಿತ ಮತದಾರರಜಾಗೃತಿಮತ್ತುಭಾಗವಹಿಸುವಿಕೆ ಕಾರ್ಯಕ್ರಮದ ಭಾಗವಾಗಿ ನಗರದಲ್ಲಿ ಶೇ.70ಕ್ಕಿಂತ ಕಡಿಮೆ ಮತದಾನವಾಗಿರುವ ಮತಗಟ್ಟೆ ಪ್ರದೇಶಗಳಲ್ಲಿ ಮತದಾರರಲ್ಲಿ ಅರಿವು ಮೂಡಿಸಲು ಏರ್ಪಡಿಸಲಾಗಿದ್ದ ವಾಕ್‌ಥಾನ್‌ನಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಏಪ್ರಿಲ್ 26ರಂದು ಮೊದಲ ಹಂತದಲ್ಲಿ ನಡೆಯಲಿರುವ ಚಿತ್ರದುರ್ಗ ಲೋಕಸಭಾ ಚುನಾವಣೆಯ ದಿನದಂದು ಜಿಲ್ಲೆಯ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯರಿತು ಮತದಾನ ಮಾಡುವ ಮೂಲಕ ಕಡ್ಡಾಯವಾಗಿ ತಮ್ಮಹಕ್ಕನ್ನು ಚಲಾಯಿಸುವಂತೆ ಮನವಿ ಮಾಡಿದ ಅವರು, ಪ್ರಜಾಪ್ರಭುತ್ವ ಎನ್ನುವುದು ಆಡಳಿತ ವ್ಯವಸ್ಥೆಯ ವಿಧಾನ ಮಾತ್ರವಲ್ಲ, ಅದೊಂದು ಒಗ್ಗೂಡಿ ಬಾಳುವ ವಿಧಾನ. ಸಮಗ್ರ ಬದುಕಿನ ಜೀವನ ಅನುಭವ. ಜೊತೆಯಲ್ಲಿರುವ ಮನುಷ್ಯರಿಗೆ ಘನತೆ ಮತ್ತು ಗೌರವ ನೀಡುವ ಕಾರ್ಯಕ್ರಮ ಇದಾಗಿದೆ ಎಂದ ಅವರು ಮತದಾನ ನಮ್ಮ ಹೆಮ್ಮೆ ಎಂದವರು ನುಡಿದರು.

ನಿಮ್ಮ ಮತ ನಿಮ್ಮ ಹಕ್ಕು. ಪ್ರತಿಯೊಬ್ಬರೂ ನಿಮ್ಮ ಹಕ್ಕನ್ನು ಚಲಾಯಿಸಿ ದೇಶದ ಸಂವಿಧಾನನ್ನು ಗೌರವಿಸುವ, ಅದನ್ನು ಸಂರಕ್ಷಿಸುವ ನಾಯಕನನ್ನು ಆರಿಸಬೇಕಾದ ಅಗತ್ಯವನ್ನು ಅರಿಯಬೇಕು. ಮತದಾನ ಸಂಭ್ರಮವಾದಾಗ ಮಾತ್ರ ದೇಶ ಸಹಜವಾಗಿ ಬದಲಾವಣೆ ಕಂಡುಕೊಳ್ಳುತ್ತದೆ ಎಂದರು.

ಎಲ್ಲರೂ ಮುಕ್ತ ಮತ್ತು ನ್ಯಾಯಸಮ್ಮತ ಹಾಗೂ ಶಾಂತಿಯುತ ಚುನಾವಣೆಗೆ ಸಹಕರಿಸುವಂತೆ ಮನವಿ ಮಾಡಿದ ಅವರು, ಪ್ರಜ್ಞಾವಂತಿಕೆಯಿಂದ ಮತ ಚಲಾಯಿಸಿ, ಸಮರ್ಥರನ್ನು ಆಯ್ಕೆ ಮಾಡಬೇಕು. ಅಮೂಲ್ಯವಾದ ಒಂದು ಮತ ಖಂಡಿತವಾಗಿ ದೇಶದ ಭವಿಷ್ಯವನ್ನು ಬದಲಾಯಿಸಲಿದೆ ಎಂದವರು ನುಡಿದರು.

ಚುನಾವಣೆಗಳು ಪ್ರಜಾಪ್ರಭುತ್ವದ ಭದ್ರ ಬುನಾದಿಯಾಗಿವೆ. ಆಮಿಷ, ಒತ್ತಡಗಳಿಗೆ ಬಲಿಯಾಗದಿರಿ. ಮತಗಟ್ಟೆಗೆ ತೆರಳಿ ನಿರ್ಭಯವಾಗಿ ಮತ ಚಲಾಯಿಸಿ, ದೇಶದ ಅಭಿವೃದ್ಧಿ ಕಾರ್ಯದಲ್ಲಿ ಕೈಜೋಡಿಸಿ ಎಂದ ಅವರು, ಅದಕ್ಕೂ ಮುನ್ನ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರಿರುವುದನ್ನು ಖಚಿತಪಡಿಸಿಕೊಳ್ಳುವಂತೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ನಗರಸಭೆ ಆಯುಕ್ತೆ ಎಂ. ರೇಣುಕಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿ–ಸಿಬ್ಬಂದಿಗಳು ಉಪಸ್ಥಿತರಿದ್ದರು.

ನಗರದ ಮಹಾತ್ಮ ಗಾಂಧಿಸರ್ಕಲ್‌ನಿಂದ ಆರಂಭಗೊಂಡ ವಾಕಥಾನ್ ಸಂತೆ ಹೊಂಡದ ರಸ್ತೆ, ಅಂಜುಮನ್ ರಸ್ತೆ, ಸರ್ಕಾರಿ ಉರ್ದು ಶಾಲೆ, ರೀಜನಲ್ ಇಂಟರ್ ನ್ಯಾಷನಲ್ ಪಬ್ಲಿಕ್ ಸ್ಕೂಲ್, ಗೋಪಾಲಪುರ ಹಾಗೂ ಜೆ.ಸಿ.ಆರ್.ಬಡಾವಣೆ, ವಿ.ಪಿ.ಬಡಾವಣೆಗಳಲ್ಲಿ ಸಂಚರಿಸಿ, ಅಂತಿಮವಾಗಿ ವೀರವನಿತೆ ಓಬವ್ವ ವೃತ್ತದಲ್ಲಿ ಸಂಪನ್ನಗೊಂಡಿತು.

ವಕೀಲರಿಂದ ಮದಕರಿ ನಾಯಕ ನಾಟಕಕ್ಕೆ ಚಾಲನೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ವಕೀಲರ ಕಲಾ ಬಳಗದಿಂದ ರಾಜವೀರ ಮದಕರಿ ನಾಯಕ ನಾಟಕಕ್ಕೆ ಅಧಿಕೃತವಾಗಿ ಚಾಲನೆ ನೀಡಲಾಯಿತು.

ಅಕ್ಟೋಬರ್ 13, 2024 ರಂದು ಮದಕರಿ ನಾಯಕ ಜಯಂತಿ ಅಂಗವಾಗಿ ಚಿತ್ರದುರ್ಗ ಜಿಲ್ಲಾ ವಕೀಲರ ಕಲಾ ಬಳಗದಿಂದ "ರಾಜವೀರ ಮದಕರಿನಾಯಕ"ಎಂಬಐತಿಹಾಸಿಕನಾಟಕವನ್ನು ಹಮ್ಮಿಕೊಳ್ಳಲಾಗಿದ್ದು, ನಾಟಕ ಯಶಸ್ವಿಗೆ ಪ್ರಥಮ ಪೂಜಾ ಕಾರ್ಯವನ್ನು ಚಿತ್ರದುರ್ಗದ ಬೆಟ್ಟದ ಮೇಲಿರುವ ಶ್ರೀ ಏಕನಾಥೇಶ್ವರಿ ಅಮ್ಮನವರಿಗೆ ಹಾಗೂ ಸಂಪಿಗೆ ಸಿದ್ದೇಶ್ವರ ಸ್ವಾಮಿಗೆ ಹಾಗೂ ರಾಜಾ ಉತ್ಸವಾಂಬ ದೇವಾಲಯಗಳಲ್ಲಿ ಪೂಜೆ ಸಲ್ಲಿಸಲಾಯಿತು. ಈ ವೇಳೆ ರಾಜವೀರ ಮದಕರಿ ನಾಯಕ ನಾಟಕದ ಯಶಸ್ವಿಯಾಗಲೆಂದು ಪ್ರಾರ್ಥಿಸಿ ಪಾತ್ರದಾರಿಗಳಾದ ವಿದ್ಯಾಧರ್, ಎನ್ ಶರಣಪ್ಪ, ಎಂ.ಮೂರ್ತಿ, ಬೋಸಯ್ಯ, ಕಿರಣ್ ಜೈನ್, ಮುತ್ತಯ್ಯ, ರವಿ ಸಿದ್ದಾರ್ಥ, ಮಾಲತೇಶ್ ಅರಸ್, ಸೋಮಶೇಖರ್ ರೆಡ್ಡಿ, ಶಿವಾರಾಧ್ಯ ಅವರು ದೇಗುಲಗಳಿಗೆ ತೆರಳಿ ಪೂಜೆ ನೆರವೇರಿಸಿದರು. ನಾಟಕದ ಉಸ್ತುವಾರಿಯನ್ನು

ಚಿತ್ರದುರ್ಗ ವಕೀಲ ಸಂಘದ ಅಧ್ಯಕ್ಷರಾದ ವೈ ತಿಪ್ಪೇಸ್ವಾಮಿ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಶ್ರೀ ಪಿ ಆರ್ ವೀರೇಶ್ ಮತ್ತು ಎಸ್ ವಿಜಯ್ ಕುಮಾರ್ ವಹಿಸಿರುತ್ತಾರೆ .ತರಬೇತುದಾರರಾದ ಮದಕರಿಪುರದ. ಹೆಚ್. ಮರಿಸ್ವಾಮಿ ಜವಾಬ್ದಾರಿ ಹೊತ್ತಿದ್ದಾರೆ.

ಮೋದಿಯವರ ಅಪ್ರತಿಮಸಾಧನೆ ಬಿಜೆಪಿ ಗೆಲುವಿಗೆ ನಾಂದಿ: ಕಾರಜೋಳ

» ಚಳ್ಳಕೆರೆ

ನಾನು ಈ ಕ್ಷೇತ್ರದಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿಯವರ ಜನಪರ ಯೋಜನೆಗಳ ಬಗ್ಗೆ ಮತದಾರರಿಗೆ ತಿಳಿಸಿ ಅವರಿಂದ ಮತಪಡೆದು ಆಯ್ಕೆಯಾಗುತ್ತೇನೆಂಬ ವಿಶ್ವಾಸ ನನಗಿದೆ ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗೋವಿಂದಕಾರಜೋಳ ತಿಳಿಸಿದರು. ಅವರು, ಬೆಂಗಳೂರು, ತುಮಕೂರು, ಹಿರಿಯೂರು ಮೂಲಕ ಚಳ್ಳಕೆರೆಗೆ ಭೇಟಿ ನೀಡಿ ಸಂದರ್ಭದಲ್ಲಿ ಟಿಎಟಿ ಟಾಕೀಸ್ ಬಳಿ ನೂರಾರು ಕಾರ್ಯಕರ್ತರು ಜಮಾಯಿಸಿ, ಪಟಾಕಿ ಸಿಡಿಸಿ ಸಂಭ್ರಮಿಸಿದರಲ್ಲದೆ ಮಹಿಳೆಯರು ಆರತಿ ಎತ್ತಿ ಸ್ವಾಗತಿಸಿದರು. ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯಾದ ನಂತರ ಮೊದಲ ಭೇಟಿಯಾಗಿದೆ.

ಕಾಡುಗೊಲ್ಲರನ್ನು ಕಡೆಗಣಿಸಿದ ಬಿಜೆಪಿಯನ್ನು ತಿರಸ್ಕರಿಸಿ

» ಚಿತ್ರದುರ್ಗ

ಕಾಡುಗಲ್ಲರು ಬಿಜೆಪಿಯನ್ನು ಬೆಂಬಲಿಸಬೇಡಿ ಎಂದು ಕಾಡುಗೊಲ್ಲರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷರಾದ ಶಿವು ಯಾದವ್ ಅವರು ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯನ್ನು ನೀಡಿರುವ ಅವರು,ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ 2014 ರಲ್ಲಿ ಕುಲಶಾಸ್ತ್ರ ಅಧ್ಯಯನ ನಡೆಸಿತು. ಅದೇ ವರ್ಷ ಕುಲಶಾಸ್ತ್ರ ಅಧ್ಯಯನ ವರದಿಯನ್ನು ಅಂಗೀಕರಿಸಿ ಕೇಂದ್ರ ಸರ್ಕಾರಕ್ಕೆ ರಾಜ್ಯದ ಕಾಡುಗೊಲ್ಲನ್ನು ಎಸ್ ಟಿ ಪಟ್ಟಿಗೆ ಸೇರಿಸಲು ಶಿಫಾರಸ್ಸು ಮಾಡಲಾಯಿತು.

2014 ರಿಂದ 2024 ರ ತನಕ 10ವರ್ಷಗಳ ಕಾಲ ಕೇಂದ್ರದ ಬಿಜೆಪಿ ಸರ್ಕಾರ ಆರ್.ಜಿ.ಐ ಯಲ್ಲಿ ಇರುವ ವರದಿಯನ್ನು ಮುಟ್ಟಲಿಲ್ಲ. ಕಳೆದ ಎರಡು ಬಾರಿ ನಡೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯ ರಾಜ್ಯ ಮತ್ತು ರಾಷ್ಟ್ರ ನಾಯಕರು ಕಾಡುಗೊಲ್ಲರನ್ನು ಎಸ್ ಟಿ ಪಟ್ಟಿಗೆ ಸೇರಿಸುವ ಭರವಸೆ ನೀಡಿ ಜನಾಂಗದ ಬಹುತೇಕ ಮತ ಪಡೆದರು.

ಕಾಡುಗೊಲ್ಲರ ನಾನಾ ಸಂಘಟನೆಗಳು 2014 ರಿಂದ 2024 ರ ವರೆಗೆ ಹತ್ತಾರು ಬಾರಿ ಹೋರಾಟಗಳನ್ನು ರೂಪಿಸಿ ರಾಜ್ಯಮಟ್ಟದಲ್ಲಿ ಕಾರ್ಯಕ್ರಮಗಳನ್ನು ನಡೆಸಿದರು. ಕಾರ್ಯಕ್ರಮದಲ್ಲಿ ಮಮ್ಮತದಿಂದ ಎಸ್ ಟಿ ಪಟ್ಟಿಗೆ ಸೇರಿಸುವಂತೆ ಒತ್ತಾಯವನ್ನು ಮಾಡಿದರು. ಆದರೆ, ಕೇಂದ್ರದ ಬಿಜೆಪಿ ಸರ್ಕಾರ ಕಾಡುಗೊಲ್ಲರ ಹೋರಾಟಕ್ಕೆ ಕವಡೆ ಕಾಸಿನ ಕಿಮ್ಮತ್ತು ನೀಡಲಿಲ್ಲ.ಶಿರಾ ಉಪ ಚುನಾವಣೆಯಲ್ಲಿ ಯಡಿಯೂರಪ್ಪ, ಕೇಂದ್ರ ಸಚಿವರಾದ ನಾರಾಯಣಸ್ವಾಮಿ, ಈಗಿನ ಬಿಜೆಪಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ಅವರು ಕಾಡುಗೊಲ್ಲರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದಾಗಿ ಭರವಸೆ ನೀಡಿದ್ದರು. ಆ ಜವಾಬ್ದಾರಿಯನ್ನು ನಾರಾಯಣಸ್ವಾಮಿ ಅವರು ವಹಿಸಿಕೊಂಡಿದ್ದರು. ಆದರೆ, ಇದುವರೆಗೂ ಕೇಂದ್ರ ಸರ್ಕಾರದಲ್ಲಿ ರಿಜಿಸ್ಟರ್ ಜನರಲ್ ಆಫ್ ಇಂಡಿಯಾ ಕಚೇರಿಯಿಂದ ಫೈಲ್ ಮಾತ್ರ ಕದಲಲಿಲ್ಲ.ಬಿಜೆಪಿ ನಾಯಕರು ನೀಡಿದ ಭರವಸೆಯಂತೆ ಈಗ ಸೇರಬಹುದು ನಾಳೆ ಸೇರಬಹುದು ಎಂದು ಕಾಡುಗೊಲ್ಲರು ನಿರಂತರವಾಗಿ ಜಾತಕ ಪಕ್ಷಯಂತೆ ಕಾಯ್ತಾ ಇದ್ದರು. ಅಮಿತ್ ಶಾ, ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಅನುಮೋದನೆ ನೀಡಿದ್ದಾರೆ. ಅರ್ಜುನ್ ಮುಂಡಾ ಅವರು ಆರ್‌ಜಿಐಗೆ ಸೂಚನೆ ನೀಡಿದ್ದಾರೆ. ರಾಜ್ಯದ ಬಿಜೆಪಿ ಸಂಸದರು ಮೋದಿ, ಅಮಿತ್ ಶಾ, ಅರ್ಜುನ್ ಮುಂಡಾ ಅವರನ್ನು ಒಪ್ಪಿಸಿದ್ದಾರೆ. ಇನ್ನೇನು ಇಂದೋ ನಾಳೆ ಕಾಡುಗೊಲ್ಲರು ಪರಿಶಿಷ್ಟ ಪಂಗಡಕ್ಕೆ ಸೇರಿಯೇ ಬಿಡುತ್ತಾರೆ ಎಂಬ ವಿಧವಿಧವಾದ ಹಸಿ ಸುಳ್ಳುಗಳನ್ನ ಹರಿಬಿಟ್ಟರು. ಕರ್ನಾಟಕದ ಕಾಡುಗೊಲ್ಲ ಸಮುದಾಯದಲ್ಲಿ ಸಮುದಾಯದ ಮೇಲೆ ಮಂಕು ಬೂದಿಯನ್ನು ಎರಚಿದರು.

ಸಂಸದರಾದ ಪ್ರಜ್ವಲ್ ರೇವಣ್ಣ ಸಂಸತ್ತಿನಲ್ಲಿ ಕಾಡುಗೊಲ್ಲರಿಗೆ ಎಸ್ ಟಿ ಮೀಸಲಾತಿ ನೀಡುವ ಕಡತ ಯಾವ ಹಂತದಲ್ಲಿದೆ ಎಂದು ಕೇಳಿದ ಪ್ರಶ್ನೆಗೆ ಕೇಂದ್ರ ಸಚಿವ ನಾರಾಯಣಸ್ವಾಮಿ ಮತ್ತು ಅರ್ಜುನ್ ಮುಂಡಾ ಅವರು ಸಮರ್ಪಕವಾದ ಉತ್ತರ ನೀಡದೆ ನುಣಿಚಿಕೊಂಡರು.ಕಾಡುಗೊಲ್ಲರನ್ನು ಎಸ್ ಟಿ ಗೆ ಸೇರಿಸುವ ವಿ

ಫಾಸ್ಟ್ ನ್ಯೂಸ್

ಕ್ಷೇತ್ರದ ಎಲ್ಲಾ ಮತಗಟ್ಟೆ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಕ್ಕೆ ಕೊರತೆ ಆಗದಂತೆ ಜಾಗ್ರತೆವಹಿಸಿ

» ಚಳ್ಳಕೆರೆ

ಲೋಕಸಭಾ ಚುನಾವಣೆಗೆ ಈಗಾಗಲೇ ಪ್ರಕ್ರಿಯೆಗಳು ಆರಂಭವಾಗಿದ್ದು, ಮತದಾನ ನಡೆಸಲು ಕೇವಲ 25 ದಿನ ಬಾಕಿ ಇದೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರದ 260 ಮತಗಟ್ಟೆಗಳಲ್ಲೂ ಎಲ್ಲಾ ರೀತಿಯ ಸೌಲಭ್ಯಗಳು ಸಿದ್ದವಿರಬೇಕು. ಮತಗಟ್ಟೆ ಕೇಂದ್ರಗಳಲ್ಲಿ ಶುದ್ದಕುಡಿಯುವ ನೀರು, ಗಾಳಿ, ಬೆಳಕು, ನೆರಳು, ಶೌಚಾಲಯ ಸೇರಿದಂತೆ ಯಾವುದೇ ಕೊರತೆ ಉಂಟಾಗದಂತೆ ಸೆಕ್ಟರ್ ಅಧಿಕಾರಿಗಳು ಗಮನಹರಿಸಬೇಕೆಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ತಿಳಿಸಿದರು.

ಅವರು, ಶನಿವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಕ್ಷೇತ್ರದ ಸೆಕ್ಟರ್ ಅಧಿಕಾರಿಗಳು, ಸ್ವೀಫ್ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳೊಂದಿಗೆ ಮತಗಟ್ಟೆ ಕೇಂದ್ರಗಳ ಸ್ಥಿತಿಗತಿಗಳ ಬಗ್ಗೆ ಚರ್ಚೆ ನಡೆಸಿದರು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು ಮತಗಟ್ಟೆಗಳ ಮೂಲಭೂತ ಸೌಕರ್ಯಗಳ ಬಗ್ಗೆ ಹೆಚ್ಚು ನಿಗಾವಹಿಸಬೇಕಿದೆ. ಸಂಬಂಧಪಟ್ಟ ಸೆಕ್ಟರ್ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಎಲ್ಲಾ ಮತಗಟ್ಟೆ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ ನೀಡಿ. ತಹಶೀಲ್ದಾರ್, ಇಒ ಸಂಬಂಧಪಟ್ಟ ಸಮಸ್ಯೆಗಳ ನಿವಾರಣೆಗೆ ಹೆಚ್ಚು ಶ್ರಮಿಸಬೇಕು ಎಂದರು. ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪೇಲಾರಹಟ್ಟಿ, ಗಾಂಧಿನಗರದ–103, ಬೆಳಗೆರೆ, ಸಿದ್ದೇಶ್ವರನದುರ್ಗ ಮತಗಟ್ಟೆ ಕೇಂದ್ರ ಗಳಲ್ಲಿ ಮತದಾರರಿಗೆ ಬೆದರಿಕೆ ಹಾಕುವ ಮತದಾನಕ್ಕೆ ಹಾಜರಾಗದಂತೆ ತಡೆಯುವ, ಮತದಾನ ಮಾಡಬಾರದೆಂದು ಕಟ್ಟಪ್ಪಣೆ ಮಾಡುವ ಪ್ರಕರಣಗಳು ವರದಿಯಾಗಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಪೊಲೀಸ್ ಇಲಾಖೆ, ಸ್ವೀಫ್ ಸಮಿತಿ ಮತಗಟ್ಟೆ ಕೇಂದ್ರಗಳಲ್ಲಿ ಮತದಾನ ಜಾಗೃತಿ ಮೂಡಿಸಬೇಕು. ಮತದಾನದಿಂದ ದೂರ ಉಳಿಯದಂತೆ ಮತದಾರರ ಮನವಲಿಸಬೇಕು ಎಂದರು. ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಒಟ್ಟು 6 ಕಡೆ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಿ ಅವುಗಳಿಗೆ ಅಧಿಕಾರಿ, ಸಿಬ್ಬಂದಿ ನೇಮಿಸಿ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವಂತೆ ನಿರ್ದೇಶನ ನೀಡಲಾಗಿದೆ. ಆದರೆ, ಈ ಬಗ್ಗೆ ಸಾರ್ವಜನಿಕರಿಂದ ಆಕ್ಷೇಪಣೆಗಳು ವ್ಯಕ್ತವಾಗಿದ್ದು, ಬೆಳಗಿನ ಸಮಯದಲ್ಲಿ ಅಧಿಕಾರಿಗಳು ಇರುವುದಿಲ್ಲವೆಂಬ ಆರೋಪವಿದೆ. ಕೆಲವೊಂದು ಚೆಕ್‌ಪೋಸ್ಟ್‌ಗಳಲ್ಲಿ ಮಾತ್ರ ನಾಲ್ವರ ಬದಲಿ ಒಬ್ಬರಿಬ್ಬರು ಸುಮ್ಮನೆ ಇರುತ್ತಾರೆ. ಈಗಾಗಲೇ ಕೆಲಸ ನಿರ್ವಹಿಸುವುದು ಹೇಗೆ ಚೆಕ್‌ಪೋಸ್ಟ್ ಮಾಡಿದ ಉದ್ದೇಶ ಸಫಲವಾಗುವುದಿಲ್ಲ. ಆದ್ದರಿಂದ ಚುನಾವಣಾ ಆಯೋಗದ ಸೂಚನೆಯಂತೆ ಎಲ್ಲಾ ಚೆಕ್‌ಪೋಸ್ಟ್‌ನಲ್ಲಿ ಸಿಬ್ಬಂದಿ ವರ್ಗ ಹಾಜರಿರಬೇಕು. ಎರಡ್ಮೂರು ದಿನಗಳಲ್ಲಿ ಚುನಾವಣಾ ವೀಕ್ಷಕರು ಆಗಮಿಸಲಿದ್ದು, ಏನಾದರೂ ಲೋಪವಾದಲ್ಲಿ ಕಾನೂನು ಕ್ರಮಕ್ಕೆ ಒಳಗಾಗುವುದು ನಿಶ್ಚಿತ ಎಂದರು. ತಹಶೀಲ್ದಾರ್ ರೇಹಾನ್‌ಪಾಷ, ಇಒ ಲಕ್ಷ್ಮಣ್, ಪೌರಾಯುಕ್ತ ಜೀವನ್‌ಕಟ್ಟಿಮನಿ, ಪ್ರಾಂಶುಪಾಲ ಮಂಜುನಾಥ, ಬಿಇಒ ಕೆ.ಎಸ್.ಸುರೇಶ್, ಸಂಪತ್, ಸಂತೋಷ್, ಜೆ.ಅಶೋಕ್, ವಿರೂಪಾಕ್ಷಪ್ಪ, ವಿನಯ್, ಡಾ.ರೇವಣ್ಣ, ಕಾವ್ಯ, ರಾಜಣ್ಣ ಮುಂತಾದವರು ಉಪಸ್ಥಿತರಿದ್ದರು.

ಬೆಳೆವಿಮೆ ವಿಳಂಬ: ನಾಳೆ ಪ್ರತಿಭಟನೆ

» ಚಿತ್ರದುರ್ಗ

ಬೆಳೆ ವಿಮೆ ಹಾಗೂ ಬೆಳೆ ಪರಿಹಾರ ವಿಳಂಬವನ್ನು ಖಂಡಿಸಿ ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ದಿನಾಂಕ:01.04.2024 ರಿಂದ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳುವುದಾಗಿ ಕರ್ನಾಟಕ ರಾಜ್ಯ ರೈತ ಸಂಘ ಚಿತ್ರದುರ್ಗ ತಾಲ್ಲೂಕು ಸರ್ಕಾರಕ್ಕೆ ಎಚ್ಚರಿಕೆಯನ್ನು ನೀಡಿದೆ.ಈ ಬಗ್ಗೆ ಜಿಲ್ಲಾ ರಕ್ಷಣಾಧಿಕಾರಿಗಳಿಗೆ ಪತ್ರವನ್ನು ನೀಡಿರುವ ರಾಜ್ಯ ರೈತ ಸಂಘದ ಮುಖಂಡರು, 2023–2024ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ವಿಮೆ ಮತ್ತು ಬೆಳೆ ಪರಿಹಾರ ನೀಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು, ವಿಮಾ ಕಂಪನಿಗಳ ನಿರ್ಲಕ್ಷದಿಂದ ರೈತರಿಗೆ ಇಲ್ಲಿಯವರೆಗೂ ಯಾವುದೇ ಸರ್ಕಾರಿ ಸೌಲಭ್ಯವನ್ನು ನೀಡದೇ ಈ ವರ್ಷ ಭೀಕರವಾದ ಬರಗಾಲ ಅವರಿಸಿದ್ದು, ಬಿಸಿಲಿನ ಬೇಗೆಯಿಂದ ರೈತಾಪಿ ಜನ ತತ್ತರಿಸಿ, ಅಂತರ್ಜಲ ಭತ್ತಿ ಹೋಗಿದ್ದು, ರೈತರ ಬೆಳೆಗಳು ಒಣಗುತ್ತಿದ್ದು, ಸರ್ಕಾರ ಚಿತ್ರದುರ್ಗ ಜಿಲ್ಲೆಯನ್ನು ಬರಗಾಲ ಜಿಲ್ಲೆಯೆಂದು ಘೋಷಣೆ ಮಾಡಿ, ಬೆಳೆ ಪರಿಹಾರ ಮತ್ತು ಬೆಳೆ ವಿಮೆ ರೈತರ ಬ್ಯಾಂಕ್ ಖಾತೆಗೆ ನೀಡದೇ ಸತಾಯಿಸುತ್ತಿದ್ದಾರೆ ಎಂದು ದೂರಿದರು. ಜಿಲ್ಲಾಧಿಕಾರಿಗಳು ಮತ್ತು ವಿಮಾ ಕಂಪನಿಯವರಭರವಸೆಚಳುವಳಿಯನ್ನುವಾಪಾಸ್ಸು ತೆಗೆದಿದ್ದು, ಮಾರ್ಚ್–18ನೇ ತಾರೀಖಿರಂದು ತಾಲ್ಲೂಕು ಕಛೇರಿಗೆ ಬೀಗ ಹಾಕಲು ರೈತ ಸಂಘಟನೆಗಳು ಕರೆ.

ಕುಡಿಯುವ ನೀರಿನ ತೊಂದರೆ ಉದ್ಭವಿಸುವ ಗ್ರಾಮಗಳ ಪಟ್ಟಿ ಸಿದ್ಧಪಡಿಸಿ

ಖಾಸಗಿ ಬೋರ್‌ವೆಲ್, ಟ್ಯಾಂಕರ್ ಗುರುತಿಸಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಕುಡಿಯುವ ನೀರಿನ ತೊಂದರೆ ಉದ್ಭವಿಸುವ ಗ್ರಾಮಗಳ ಪಟ್ಟಿಯನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಿದ್ಧಪಡಿಸಬೇಕು. ಸಾರ್ವಜನಿಕರಿಗೆ ಕುಡಿಯುವ ನೀರು ಒದಗಿಸುವ ಕರ್ತವ್ಯ ನಿಮ್ಮದಾಗಿದೆ. ಮುಂಚಿತವಾಗಿಯೇ ಖಾಸಗಿಬೋರ್‌ವೆಲ್ ಹಾಗೂ ಟ್ಯಾಂಕರ್‌ಗಳನ್ನು ಗುರುತಿಸಿ ಅಗತ್ಯ ಬಿದ್ದಾಗ ಸೇವೆಗೆ ಪಡೆಯುವಂತೆ ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ಹೇಳಿದರು.

ನಗರದ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಕುಡಿಯುವ ನೀರು ಸರಬರಾಜು ಕುರಿತು ಜರುಗಿದ ಸಭೆಯಲ್ಲಿ ಅವರು ಮಾತನಾಡಿದರು.

ಕುಡಿಯುವ ನೀರಿನ ಸಮಸ್ಯೆ ಎದುರಿಸಲು ನಿಖರ ಅಂಕಿ ಅಂಶಗಳನ್ನು ಸಂಗ್ರಹಿಸಬೇಕು. ಗ್ರಾಮಗಳ ವ್ಯಾಪ್ತಿಯಲ್ಲಿ ಬೋರ್‌ವೆಲ್‌ಗಳ ಪಟ್ಟಿ ಸಿದ್ಧಪಡಿಸಬೇಕು. ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲು ನೀತಿ ಸಂಹಿತೆ ಅಡ್ಡಿ ಬರುವುದಿಲ್ಲ. ಹೊಸ ಬೋರ್‌ವೆಲ್ ಕೊರೆದು, ಪೈಪ್‌ಲೈನ್ ಅಳವಡಿಸಿ ನೀರು ಸರಬರಾಜು ಮಾಡುವ ಕುರಿತು ವಿಸ್ತೃತ ಯೋಜನಾ ವರದಿಯನ್ನು ನೀಡಬೇಕು. ಇದಕ್ಕೆ ಪಿಡಿಓಗಳು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇಂಜಿನಿಯರ್‌ಗಳ ಸಹಾಯ ಪಡೆದುಕೊಳ್ಳುವಂತೆ ತಹಶೀಲ್ದಾರ್ ಡಾ.ನಾಗವೇಣಿ ಸೂಚಿಸಿದರು.

ಹಲವು ಗ್ರಾಮಗಳಲ್ಲಿ ಈಗಾಗಲೇ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಈ ಟ್ಯಾಂಕರ್‌ಗಳಿಗೆ ಜಿಪಿಎಸ್ ಅಳವಡಿಸಲಾಗಿದೆ. ಎಷ್ಟು ಬಾರಿ ಟ್ಯಾಂಕರ್‌ಗಳನ್ನು ನೀರು ಸರಬರಾಜು ಮಾಡಿವೆ. ಬೋರ್‌ವೆಲ್‌ಗಳಲ್ಲಿ ದೊರಕುವ ನೀರಿನ ಪ್ರಮಾಣ ಏನು ಎಂಬುದರ ಬಗ್ಗೆ ಧೃಡೀಕರಣ ನೀಡಬೇಕು.

ಈಗಾಗಲೇ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಟೆಂಡರ್ ನೀಡಲಾಗಿದೆ. ನಿಮ್ಮ ವ್ಯಾಪ್ತಿಯ ಕಂದಾಯ ನಿರೀಕ್ಷಕರ ಮೂಲಕ ಈ ಟ್ಯಾಂಕರ್‌ಗಳನ್ನು ಗ್ರಾಮಗಳಿಗೆ ಪಡೆದುಕೊಳ್ಳುವಂತೆ ಹೇಳಿದರು.

ಪ್ರಸ್ತುತ ಬರಪರಿಸ್ಥಿತಿ ಉಂಟಾಗಿದೆ. ಕೆಲಸ ದೊರಕದೆ ಯಾರು ಸಹ ಗುಳೆ ಹೋಗದಂತೆ ನೋಡಿಕೊಳ್ಳಬೇಕು. ನರೇಗಾದಡಿ ಗ್ರಾಮದಲ್ಲಿಯೇ ಕೆಲಸವನ್ನು ಸೃಜಿಸಿ, ಬಡ ಕುಟುಂಬಗಳಿಗೆ ಆರ್ಥಿಕ ನೆರವು ನೀಡಬೇಕು. ಕುಡಿಯುವ ನೀರು ಸರಬಾಜಿನಲ್ಲಿ ವ್ಯತ್ಯಯ ಉಂಟಾಗಬಾರದು. ಜಾನುವಾರುಗಳಿಗೂ ಕುಡಿಯುವ ನೀರು ಕಲ್ಪಿಸುವ ಕೆಲಸ ಮಾಡುವಂತೆ ತಾ.ಪಂ. ಇಒ ಅನಂತರಾಜು ಪಿಡಿಓಗಳಿಗೆ ನಿರ್ದೇಶನ ನೀಡಿದರು.

ಚಿತ್ರದುರ್ಗ ತಾಲ್ಲೂಕಿನಲ್ಲಿ ಸದ್ಯ 6 ಗ್ರಾಮ ಪಂಚಾಯಿತಿ ವ್ಯಾಪ್ತಿಯ 9 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. 8 ಗ್ರಾಮ ಪಂಚಾಯತಿ ವ್ಯಾಪ್ತಿಯ 16 ಗ್ರಾಮಗಳಲ್ಲಿ ಖಾಸಗಿ ಬೊರೆವೆಲ್ ಬಾಡಿಗೆ ಪಡೆದು ನೀರು ಒದಗಿಸಲಾಗುತ್ತಿದೆ. ಮುಂಬರುವ ದಿನಗಳಲ್ಲಿ 27 ಗ್ರಾಮ ಪಂಚಾಯತಿ ವ್ಯಾಪ್ತಿಯ 59 ಗ್ರಾಮಗಳಲ್ಲಿ ತೀವ್ರ ತರನಾದ ಕುಡಿಯುವ ನೀರಿನ ಸಮಸ್ಯೆ ತಲೆದೊರಬಹುದು. ಈ ನಿಟ್ಟಿನಲ್ಲಿ ನೀರಿನ ಸೌಕರ್ಯ ಒದಗಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಸೂಚನೆ ನೀಡಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ಇಂಜಿನಿಯರ್ ಶಿವಮೂರ್ತಿ, ಆರ್.ಡಿ.ಪಿ.ಆರ್ ಸಹಾಯಕ ನಿರ್ದೇಶಕಿ ರೂಪಕುಮಾರಿ, ತಾ.ಪಂ ವ್ಯವಸ್ಥಾಪಕ ತಿಪ್ಪೇಸ್ವಾಮಿ ಸೇರಿದಂತೆ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿ ಪಿಡಿಓಗಳು ಉಪಸ್ಥಿತರಿದ್ದರು.

ಕೇಳುವ, ಪ್ರಶ್ನಿಸುವ, ಚರ್ಚಿಸುವ ಮನೋಭಾವ ಕ್ಷೀಣ

» ದಾವಣಗೆರೆ

ಪ್ರಸ್ತುತ ದಿನಮಾನಗಳಲ್ಲಿ ಕೇಳುವ, ಪ್ರಶ್ನಿಸುವ ಮತ್ತು ಚರ್ಚಿಸುವ ಮನೋಭಾವ ಕ್ಷೀಣಿಸುತ್ತಿದ್ದು, ಇವುಗಳನ್ನು ಬೆಳೆಸಿಕೊಂಡಲ್ಲಿ ಮಾತ್ರ ವ್ಯಕ್ತಿ ಪರಿಪೂರ್ಣರಾಗಲು ಸಾಧ್ಯ ಎಂದು ಚಿತ್ರದುರ್ಗದ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಡಾ.ನಟರಾಜ್ ಸಲಹೆ ನೀಡಿದರು.

ನಗರದ ವಕೀಲರ ಸಾಂಸ್ಕೃತಿಕ ಸಮುದಾಯಭವನದಲ್ಲಿ ಜಿಲ್ಲಾ ವಕೀಲರ ಸಂಘದಿಂದ ಆಯೋಜಿಸಲಾಗಿದ್ದ ನ್ಯಾಯವಾದಿಗಳಿಗೆ ನ್ಯಾಯ ವಿಜ್ಞಾನ ಉಪನ್ಯಾಸ ಮಾಲಿಕೆ–7 ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಒಂದು ವಿಶ್ವವಿದ್ಯಾನಿಲಯ ಮಾಡುವ ಕೆಲಸವನ್ನು ದಾವಣಗೆರೆ ಜಿಲ್ಲಾ ವಕೀಲರ ಸಂಘ ಮಾಡುತ್ತಿದೆ. ಉಪನ್ಯಾಸ ಮಾಲಿಕೆಗಳನ್ನು ಆಯೋಜಿಸುವ ಮೂಲಕ ನ್ಯಾಯವಾದಿಗಳಿಗೆ ಉತ್ತಮ ಮಾಹಿತಿ ನೀಡುತ್ತಿದ್ದು, ಸಂಘದ ಕಾರ್ಯ ಶ್ಲಾಘನೀಯ. ಮೂಲ ಸೌಕರ್ಯ ಅಭಿವೃದ್ಧಿ ಆದಂತೆ ವಕೀಲರ ಕೌಶಲ್ಯ ಕೂಡ ಹೆಚ್ಚಾಗಬೇಕು. ಇದಲ್ಲದೇ ಹಿರಿಯ ವಕೀಲರ ಮಾರ್ಗದರ್ಶನದಲ್ಲಿ ಕಿರಿಯ ವಕೀಲರು ತಮ್ಮ ಜ್ಞಾನಾರ್ಜನೆಯನ್ನು ವೃದ್ಧಿಸಿಕೊಳ್ಳಬೇಕೆಂದರು.

ಕಾರ್ಯಕ್ರಮ ಉದ್ಘಾಟಿಸಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಮಾತನಾಡಿ, ದಾವಣಗೆರೆ ಜಿಲ್ಲಾ ವಕೀಲರ ಸಂಘದಿಂದ ಹಲವಾರು ರಚನಾತ್ಮಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಇದರಿಂದ ಕಿರಿಯ ವಕೀಲರಿಗೆ ಅನುಕೂಲ ಆಗಿದ ಎಂದು ಹೇಳಿದರು.

ಮಕ್ಕಳ ಸ್ನೇಹಿ ನ್ಯಾಯಾಲಯದ ನ್ಯಾಯಾಧೀಶರಾದ ಎನ್.ಶ್ರೀಪಾದ ಮಾತನಾಡಿ, ನ್ಯಾಯಾಧೀಶರು, ವಕೀಲರು, ಪೊಲೀಸರು ಮತ್ತು ವೈದ್ಯರಿಗೆ ಇಂತಹ ಉಪನ್ಯಾಸ ಮಾಲಿಕೆಗಳು ಅಗತ್ಯವಾಗಿ ಬೇಕು. ಇಂತಹ ಉಪನ್ಯಾಸಗಳಿಂದ ವಕೀಲರು ತಮ್ಮ ಪ್ರಕರಣಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಲು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಯುವ ವಕೀಲರಿಗೆ ನ್ಯಾಯ ವಿಜ್ಞಾನದ ಅರಿವು ಅಗತ್ಯವಾಗಿದ್ದು, ಕಾಲಕಾಲಕ್ಕೆ ಕಾನೂನು ಜ್ಞಾನವನ್ನು ಹರಿತಗೊಳಿಸುವ ನಿಟ್ಟಿನಲ್ಲಿ ಹಲವಾರು ಕಾರ್ಯಕ್ರಮಗಳನ್ನು ವಕೀಲರ ಸಂಘ ಆಯೋಜಿಸಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಹಾವೀರ ಎಂ.ಕರೆಣ್ಣವರ್, ಕೆ.ದಶರಥ್, ಶಿವಪ್ಪ ಸಲಗೆರೆ, ಪ್ರವೀಣ್‌ಕುಮಾರ್, ವಕೀಲರ ಸಂಘದ ಎ.ಎಸ್.ಮಂಜುನಾಥ್, ಬಸವರಾಜ್ ಇತರರು ಇದ್ದರು.

ಮೇಗಳಕೊಟ್ಟಿಗೆಯಲ್ಲಿ ಮಾರಿಕಾಂಭ ದೇವಿ ರಥೋತ್ಸವ

» ಹೊಸದುರ್ಗ

ತಾಲೂಕಿನ ಗಡಿ ಗ್ರಾಮವಾದ ಮೇಗಳಕೊಟ್ಟಿಗೆ ಗ್ರಾಮದಲ್ಲಿ ನೆಲೆಸಿರುವ ಶ್ರೀ ಮಾರಿಕಾಂಭ ದೇವಿಯ ರಥೋತ್ಸವವು ಶನಿವಾರ ಮುಂಜಾನೆ ವೈಭವಯುತವಾಗಿ ಜರುಗಿತು.ಗ್ರಾಮದ ಮತ್ತು ಸುತ್ತ ಮುತ್ತಲ ಭಾಗ ಭಕ್ತರು ದೇವಿಯ ದರ್ಶನ ಪಡೆದರು. ಮಾರ್ಚ್ 25 ರಿಂದ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಜರುಗಿದವು. ಸುತ್ತಮುತ್ತಲಿನ ಗ್ರಾಮಗಳಾದ ಕಬ್ಬಳ. ಉಗಣೆಕಟ್ಟೆ, ಕೆಳಗಿನಕೊಟ್ಟಿಗೆ, ಎನ್.ಜಿ.ಹಳ್ಳಿ, ಮಾವಿನಕಟ್ಟೆ, ದೇವಿಗೆರೆ ಬೀಸನಹಳ್ಳಿ ಹಾಗೂ ನಾನಾ ಕಡೆಗಳಿಂದ ಭಕ್ತರು ಆಗಮಿಸಿದ್ದರು.ದೇವಿಯ ಮದುವಣಗಿತ್ತಿ ಶಾಸ್ತ್ರ ವಸ್ತ್ರಾಭರಣ ಅಲಂಕಾರ ಹೊಳೆಪೂಜೆ, ಅಗ್ನಿಕುಂಡ, ಬಾನು, ಬೇವಿನ ಸೀರೆ ಹಾಗೂ ಹೂವಿನ ಪಲ್ಲಕ್ಕಿ ಉತ್ಸವ ನಡೆಯಿತು. ಗ್ರಾಮ ದೇವಿಯು ಸಕಲ ಜೀವರಾಶಿಗೂ ಒಳಿತನ್ನು ಬಯಸಿ, ಭಕ್ತರ ಇಷ್ಟಾರ್ಥ ಪೂರೈಸುತ್ತಾ ಜನರ ಕಲ್ಯಾಣಕ್ಕಾಗಿ ಹಾಗು ಈ ಬಾರಿ ಸತತವಾಗಿ ಮಳೆ ಹೋಗಿದ್ದು ಇನ್ನು ಮುಂದೆ ಸರ್ವರಿಗೂ ಸಹಾ ಸಂವೃದ್ದಿಯನ್ನ ನೀಡು ದೇವಿ ಎಂದು ಪ್ರಾರ್ಥಿಸಿದರು.ರಥೋತ್ಸವದ ಅಂಗವಾಗಿ ಶನಿವಾರ ಸಂಜೆ ಗ್ರಾಮದಲ್ಲಿ ಅನ್ನಸಂತರ್ಪಣೆಯನ್ನ ಆಯೋನೆ ಮಾಡಲಾಗಿತ್ತು ಅಪಾರ ಭಕ್ತ ಸಮೂಹ ರಥೋತ್ಸವ ಸಮಯದಲ್ಲಿ ದೇವಿಯ ದರ್ಶನ ಪಡೆದು, ಧನ್ಯತಾಭಾವ ವ್ಯಕ್ತಪಡಿಸಿದರು. ಜೋತೆಗೆ ಸೋಮನ ಕುಣಿತ ಎಲ್ಲರನ್ನು ರಂಜಿಸಿತು. ರಥೋತ್ಸವದ ಸಂಧರ್ಬದಲ್ಲಿ ಗ್ರಾಮದ ಮುಖಂಡರುಗಳು ಉಪಸ್ಥಿತರಿದ್ದರು. ಎಪ್ರಿಲ್ 1 ರಂದು ಸೋಮವಾರ ಓಕಳಿ ಕಾರ್ಯಕ್ರಮದೊಂದಿಗೆ ಜಾತ್ರ ಮಹೋತ್ಸವಕ್ಕೆ ತೆರೆ ಬೀಳಲಿದೆ.

ಶ್ರೀಮಲ್ಲಪ್ಪಸ್ವಾಮಿ ಆಶೀರ್ವಾದ ಪಡೆದ ಗೋವಿಂದಕಾರಜೋಳ.

ಚಳ್ಳಕೆರೆ ತಾಲ್ಲೂಕಿನ ದೊಡ್ಡೇರಿ ಶ್ರೀಕನ್ನೇಶ್ವರಮಠಕ್ಕೆ ಭೇಟಿ ನೀಡಿ ದತ್ತಾವಧೂತ ಶ್ರೀಮಲ್ಲಪ್ಪಸ್ವಾಮಿ ಆಶೀರ್ವಾದ ಪಡೆದ ಗೋವಿಂದಕಾರಜೋಳ.

ಪ್ರಮುಖ ಸುದ್ದಿ

ಬಿಸಿಲಿನ ತಾಪ ಹೆಚ್ಚಳ, ಕುಡಿಯುವ ನೀರಿನ ಸಮಸ್ಯೆ ಉಲ್ಬಣ ನಿರೀಕ್ಷೆ, ಖಾಸಗಿ ಕೊಳವೆಬಾವಿ ಬಾಡಿಗೆ ಪಡೆಯಲು ಮುಂದಾಗಿ

ಕುಡಿವ ನೀರು ಸಮಸ್ಯೆಗೆ ತಕ್ಷಣ ಸ್ಪಂದಿಸುವ ಕೆಲಸ ಆಗಬೇಕು

» ದಾವಣಗೆರೆ

ಬೇಸಿಗೆ ತಾಪಮಾನ ಹೆಚ್ಚಳವಾಗಿದ್ದು ಎಲ್ಲ ಕಡೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗುವ ನಿರೀಕ್ಷೆ ಇದ್ದು ತಕ್ಷಣ ಕುಡಿಯುವ ನೀರಿನ ಪೂರೈಕೆಗಾಗಿ ಖಾಸಗಿ ಕೊಳವೆಬಾವಿಗಳನ್ನು ಗುರುತಿಸಿಟ್ಟುಕೊಂಡು ಸಮಸ್ಯೆಯಾದ ಕಡೆ ತಕ್ಷಣವೇ ಅಧಿಕಾರಿಗಳು ಸ್ಪಂದಿಸುವ ಕೆಲಸ ಮಾಡಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರಾದ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕುಡಿಯುವ ನೀರು ಸರಬರಾಜು ಕುರಿತಂತೆ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿ ತಿಳಿಸಿದರು. ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಮೂಲಕ ಸಾಕಷ್ಟು ಗ್ರಾಮಗಳಿಗೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಆದರೆ ಕಾಲುವೆ ಮತ್ತು ನದಿಯಲ್ಲಿನ ನೀರು ಹರಿವು ಕಡಿಮೆಯಾಗಿದ್ದರಿಂದ ಸಮ